ಸತ್ಯ ಮತ್ತು ಧೈರ್ಯದ ಧ್ವನಿ

# ತುಂಗ ಬಿಂಬ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923











ಸಂಪುಟ: Vol: 04 | ಸಂಚಿಕೆ: Issue: 112 | ರಾಯಚೂರು Raichur | 14-10-2026 | ಬುಧವಾರ Wednesday | ಪುಟ : Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ | Editor: Gururaja K 98863 85685


# 2029ರ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಮತ್ತೊಂದು ಭಾರಿ ಸೋಲು: ಅಮಿತ್ ಶಾ ವಾಗ್ದಾಳಿ

ನವದೆಹಲಿ: ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ವಿರುದ್ಧ ವಿರೋಧ ಪಕ್ಷಗಳು ನಡೆಸುತ್ತಿರುವ ಪ್ರತಿಭಟನೆ ಹಾಗೂ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯ ಕುರಿತು ನಡೆಯುತ್ತಿರುವ ರಾಜಕೀಯ ಸಂಘರ್ಷದ ನಡುವೆಯೇ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಕಾಂಗ್ರೆಸ್ ನಾಯಕ ಹಾಗೂ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷವು ಜನರ ವಿಶ್ವಾಸ ಗಳಿಸುವ ಬದಲು ನಕಾರಾತ್ಮಕ ರಾಜಕೀಯದಲ್ಲಿ ತೊಡಗಿಸಿಕೊಂಡಿದೆ ಎಂದು ಆರೋಪಿಸಿದರು. 2029ರ ಲೋಕಸಭೆ ಚುನಾವಣೆಯಲ್ಲಿಯೂ ಕಾಂಗ್ರೆಸ್‌ಗೆ ಮತ್ತೊಂದು ಭಾರಿ ಸೋಲು ಎದುರಾಗಲಿದೆ ಎಂದು ಹೇಳಿದ ಅವರು, ಬಿಜೆಪಿ ನೇತೃತ್ವದ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟ (ಎನ್‌ಡಿಎ) ಮತ್ತೆ ಬಹುಮತ ಪಡೆಯಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ದೇಶದ ಜನರು ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವ, ಬಿಜೆಪಿ ಹಾಗೂ ಎನ್‌ಡಿಎ ಒಕ್ಕೂಟದೊಂದಿಗೆ ಇದ್ದಾರೆ. ಕಾಂಗ್ರೆಸ್ ನಾಯಕರು ಈ ವಾಸ್ತವವನ್ನು ಒಪ್ಪಿಕೊಳ್ಳಲು ಸಿದ್ಧರಿಲ್ಲ. ಕೇಂದ್ರ ಸರ್ಕಾರದ ವಿರುದ್ಧ ನಿರಂತರ ಆರೋಪಗಳನ್ನು ಮಾಡುವುದರಿಂದ ಮಾತ್ರ ಜನರ ಬೆಂಬಲ ಪಡೆಯಲು ಸಾಧ್ಯವಿಲ್ಲ ಎಂದು ಶಾ ಟೀಕಿಸಿದರು.

ರಾಹುಲ್ ಗಾಂಧಿ ಹಾಗೂ ಅವರ ಸಹಚರರು 2029ರ ಚುನಾವಣೆಯಲ್ಲಿ ಮತ್ತೊಂದು ಸೋಲನ್ನು ಎದುರಿಸಲು ಸಿದ್ಧರಾಗಬೇಕು. ಕಾಂಗ್ರೆಸ್ ಪಕ್ಷವು ಸತತ ನಾಲ್ಕನೇ ಬಾರಿಗೆ ಲೋಕಸಭೆ ಚುನಾವಣೆಯಲ್ಲಿ ಹಿನ್ನಡೆ ಅನುಭವಿಸಲಿದೆ ಎಂದು ಅವರು ಭವಿಷ್ಯ ನುಡಿದರು. ಇದನ್ನು ತಮ್ಮ ರಾಜಕೀಯ ವಿಶ್ವಾಸವೆಂದು ಪ್ರತಿಪಾದಿಸಿದ ಶಾ, ಬಿಜೆಪಿ ಹಾಗೂ ಎನ್‌ಡಿಎಗೆ ಸಾರ್ವಜನಿಕರ ಬೆಂಬಲ ಮುಂದುವರಿಯಲಿದೆ ಎಂದರು.

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯ ವಿರುದ್ಧ ರಾಹುಲ್ ಗಾಂಧಿ ವ್ಯಕ್ತಪಡಿಸಿರುವ ಆಕ್ಷೇಪಗಳನ್ನೂ ಅಮಿತ್ ಶಾ ಪ್ರಶ್ನಿಸಿದರು. ಮತದಾರರ ಪಟ್ಟಿಯ ಪರಿಷ್ಕರಣೆಗೆ ವಿರೋಧ ವ್ಯಕ್ತಪಡಿಸುವ ಮೂಲಕ ಕಾಂಗ್ರೆಸ್ ಒಳನುಸುಳುಕೋರರನ್ನು ಮತದಾರರಾಗಿ ನೋಂದಾಯಿಸಲು ಅವಕಾಶ ಕಲ್ಪಿಸಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದರು.

ಮತದಾರರ ಪಟ್ಟಿಯ ಪರಿಷ್ಕರಣೆ ಪ್ರಕ್ರಿಯೆ ಹಾಗೂ ಚುನಾವಣಾ ಅಕ್ರಮಗಳ ಕುರಿತು ವಿರೋಧ ಪಕ್ಷಗಳು ಮಾಡುತ್ತಿರುವ ಆರೋಪಗಳ ನಡುವೆ ನೇರ ಸಂಬಂಧವಿದೆಯೇ ಎಂಬುದನ್ನು ಸ್ಪಷ್ಟಪಡಿಸಬೇಕು ಎಂದು ಒತ್ತಾಯಿಸಿದರು. 2024ರ ಸಾರ್ವತ್ರಿಕ ಚುನಾವಣೆಯ ನಂತರ ಆರಂಭವಾದ ಪರಿಷ್ಕರಣಾ ಪ್ರಕ್ರಿಯೆಯನ್ನು ಹಿಂದಿನ ಚುನಾವಣಾ ಫಲಿತಾಂಶಗಳೊಂದಿಗೆ ಜೋಡಿಸಿ ಪ್ರಶ್ನಿಸುವುದು ಎಷ್ಟು ಸಮಂಜಸ ಎಂಬುದರ ಕುರಿತು ರಾಹುಲ್ ಗಾಂಧಿ ಉತ್ತರಿಸಬೇಕು ಎಂದು ಹೇಳಿದರು.



ಈ ಆರೋಪಗಳು ಅಮಿತ್ ಶಾ ಅವರ ರಾಜಕೀಯ ನಿಲುವಾಗಿದ್ದು, ವಿರೋಧ ಪಕ್ಷಗಳು ಮತದಾರರ ಪಟ್ಟಿಯ ಪರಿಷ್ಕರಣೆ ಪ್ರಕ್ರಿಯೆಯ ಪಾರದರ್ಶಕತೆ ಮತ್ತು ಮತದಾನದ ಹಕ್ಕಿನ ರಕ್ಷಣೆ ಕುರಿತು

2ನೇ ಪುಟಕ್ಕೆ

## ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಹಣ, ಉಡುಗೊರೆ ಹಂಚಿಕೆ ಆರೋಪ: ಛಲವಾದಿ ನಾರಾಯಣಸ್ವಾಮಿ



ರಾಯಚೂರು, ಅ.13: ಈಶಾನ್ಯ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮತದಾರರಿಗೆ ಹಣ ಹಾಗೂ ಉಡುಗೊರೆಗಳನ್ನು ಹಂಚುವ ಮೂಲಕ ಚುನಾವಣಾ ಅಕ್ರಮಗಳಲ್ಲಿ ತೊಡಗಿದ್ದಾರೆ ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಆರೋಪಿಸಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಜೆಪಿ-ಜೆಡಿಎಸ್ ಮೈತ್ರಿ ಅಭ್ಯರ್ಥಿ ಶಶೀಲ್ ಜಿ. ನಮೋಶಿ ಪರ ಪ್ರಚಾರ ನಡೆಸಲಾಗುತ್ತಿದೆ. ಕಾಂಗ್ರೆಸ್ ಪುಟ್ಟಣ್ಣ ಅವರು ಈ ಹಿಂದೆ ಜೆಡಿಎಸ್, ಬಿಜೆಪಿ ಪಕ್ಷಗಳಲ್ಲಿದ್ದು, ಇದೀಗ ಕಾಂಗ್ರೆಸ್ ಸೇರಿದ್ದಾರೆ. ಶಿಕ್ಷಕರ ಕ್ಷೇತ್ರದ ಚುನಾವಣೆ ಗ್ರಾಮ ಪಂಚಾಯಿತಿ ಚುನಾವಣೆಯಲ್ಲ. ಶಿಕ್ಷಕರ ಮತಗಳನ್ನು ಹಣ, ಉಡುಗೊರೆಗಳಿಂದ ಖರೀದಿಸಲು ಸಾಧ್ಯವಿಲ್ಲ. ಸರ್ಕಾರಿ ಅಧಿಕಾರಿಗಳನ್ನೂ ಚುನಾವಣಾ ಉದ್ದೇಶಕ್ಕೆ ದುರ್ಬಳಕೆ ಮಾಡಿಕೊಳ್ಳಲಾಗುತ್ತಿದೆ ಎಂದು ಆರೋಪಿಸಿದರು.

ದೆಹಲಿಯಲ್ಲಿ ಸುಪ್ರೀಂ ಕೋರ್ಟ್ ಕಡೆಗೆ ಸಾಗುತ್ತಿದ್ದ ಪ್ರತಿಭಟನಾ ಮೆರವಣಿಗೆಯ ಸಂದರ್ಭದಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಕರ್ನಾಟಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಅಂಗಿಯನ್ನು ಹಿಡಿದು ಹಿಂದಕ್ಕೆ ಎಳೆದಿದ್ದಾರೆ ಎಂದು ಆರೋಪಿಸಿ ಆಕ್ರೋಶ ವ್ಯಕ್ತಪಡಿಸಿದರು. ರಾಜ್ಯದ ಮುಖ್ಯಮಂತ್ರಿಯನ್ನು ಸಾರ್ವಜನಿಕವಾಗಿ ಈ ರೀತಿ ನಡೆಸಿಕೊಳ್ಳುವುದು ಸರಿಯಲ್ಲ. ಶಿವಕುಮಾರ್ ಕಾಂಗ್ರೆಸ್ ಪಕ್ಷದವರಾಗಿರಬಹುದು. ಆದರೆ ಅವರು ಕರ್ನಾಟಕದ ಮುಖ್ಯಮಂತ್ರಿ ಎಂಬುದನ್ನು ಮರೆಯಬಾರದು. ಅವರಿಗೆ ಸಲ್ಲಬೇಕಾದ ಗೌರವ ನೀಡದಿರುವುದು ರಾಜ್ಯದ ಜನತೆಗೆ ಮಾಡಿದ ಅವಮಾನವಾಗಿದೆ ಎಂದು ಟೀಕಿಸಿದರು. ಈ ಘಟನೆಯ ಕುರಿತು ಕಾಂಗ್ರೆಸ್ ನಾಯಕರು ಜನಸಂದಣಿಯ ನೂಕುನುಗ್ಗಲಿನಿಂದ ಹೀಗಾಗಿದೆ ಎಂದು ಸಮರ್ಥಿಸಿಕೊಂಡಿದ್ದಾರೆ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ

2ನೇ ಪುಟಕ್ಕೆ

## ಅಪಘಾತಗಳು ಆಗದಂತೆ ಮುನ್ನೆಚ್ಚರಿಕೆ ವಹಿಸಿ: ಜಿಲ್ಲಾಧಿಕಾರಿ ಪೂವಿತಾ ಎಸ್.

ರಾಯಚೂರು ಅ. 13 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲೆಯಲ್ಲಿ ಯಾವುದೇ ರಸ್ತೆ ಅಪಘಾತಗಳು ಆಗದಂತೆ ಮುನ್ನೆಚ್ಚರಿಕೆ ವಹಿಸಬೇಕು. ಹಾಗೂ ಅಪಘಾತಗಳು ಆಗಬಹುದಾದ ಸ್ಥಳಗಳನ್ನು ಗುರುತಿಸಿ ವರದಿ ನೀಡಬೇಕೆಂದು ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಸಂಬಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಅಕ್ಟೋಬರ್ 13ರ ಮಂಗಳವಾರ ದಂದು ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ರಸ್ತೆ ಸುರಕ್ಷತಾ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಆರ್‌ಟಿಒ, ಲೋಕೋಪಯೋಗಿ ಇಲಾಖೆ ಮತ್ತು ಪೊಲೀಸ್ ಇಲಾಖೆಗಳು ಒಟ್ಟಾಗಿ ಜಂಟಿ ತನಿಖೆ ನಡೆಸಿ, ಅಪಘಾತಗಳನ್ನು ತಡೆಯಲು ಅಗತ್ಯವಿರುವ ಕ್ರಮಗಳ ಬಗ್ಗೆ ವರದಿಯನ್ನು ಸಲ್ಲಿಸಬೇಕು. ಅಲ್ಲದೆ ಮುಂದಿನ 20 ದಿನಗಳಲ್ಲಿ ಎಲ್ಲಾ ಫೀಡರ್ ರಸ್ತೆಗಳು ಮತ್ತು ಜಂಕ್ಷನ್‌ಗಳನ್ನು ಪರಿಶೀಲನೆ ಮಾಡಿ, ವರದಿ ನೀಡಬೇಕೆಂದು ಸಂಬಧಿಸಿದ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಕಡ್ಡಾಯವಾಗಿ ಬೈಕ್ ಸವಾರರು ಬೈಕ್ ಚಾಲನೆ ಮಾಡುವ ಸಮಯದಲ್ಲಿ ಹೆಲ್ಮೆಟ್ ಧರಿಸಬೇಕು. ವಾಹನ ಚಾಲಾಯಿಸುವಾಗ ಮೊಬೈಲ್ ಬಳಕೆ ಮಾಡಬಾರದು. ಅಲ್ಲದೆ ವಾಹನಗಳಿಗೆ ಎರಡು ಕಡೆಗೆ ಸೈಡ್ ಮಿರರ್ ಇರಬೇಕು. ಜಿಲ್ಲೆಯಲ್ಲಿ ಈ ನಿಯಮಗಳನ್ನು ಪಾಲಿಸದ ಸವಾರರ ವಿರುದ್ಧ ದಂಡ ವಿಧಿಸಿ, ಕ್ರಮ ಕೈಗೊಳ್ಳಬೇಕು. ರಸ್ತೆಗಳು ಮತ್ತು ಜಂಕ್ಷನ್ ಗಳನ್ನು ಕಾಲಕಾಲಕ್ಕೆ ಪರಿಶೀಲಿಸಬೇಕು ಎಂದು ಸಂಬಧಿಸಿದ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಕಟ್ಟುನಿಟ್ಟಿನ ಸೂಚನೆ ನೀಡಿದರು.

ರಾಯಚೂರು ಕಾರ್ಪೊರೇಷನ್ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸ್ಪೀಡ್ ಬ್ರೇಕರ್‌ಗಳು ಮತ್ತು ಟೆಕ್ಕಳನ್ನು

2ನೇ ಪುಟಕ್ಕೆ

## ತುಂಗಭದ್ರಾ ಕಾರ್ಮಿಕರ ಬಾಕಿ ವೇತನ ಪಾವತಿ, ವಿಜಯಲಕ್ಷ್ಮಿ ಪಾಟೀಲ ಅಮಾನತಿಗೆ ಅ.22ರ ಗಡುವು



ರಾಯಚೂರು, ಅ.13: ತುಂಗಭದ್ರಾ ಎಡದಂಡೆ ಕಾಲುವೆಯಲ್ಲಿ ಕಾರ್ಯನಿರ್ವಹಿಸಿದ ಗುತ್ತಿಗೆ ಕಾರ್ಮಿಕರ ಬಾಕಿ ವೇತನ ಪಾವತಿಸಲು ಕಾರ್ಮಿಕ ನ್ಯಾಯ ಪ್ರಾಧಿಕಾರ ಆದೇಶಿಸಿದ್ದು, ಅಕ್ಟೋಬರ್ 22ರೊಳಗೆ ಆದೇಶ ಜಾರಿಗೊಳಿಸುವುದರ ಜೊತೆಗೆ ಕಾರ್ಯಪಾಲಕ ಅಭಿಯಂತರರಾದ ವಿಜಯಲಕ್ಷ್ಮಿ ಪಾಟೀಲ ಅವರನ್ನು ಅಮಾನತುಗೊಳಿಸಬೇಕು ಎಂದು ತುಂಗಭದ್ರ ನೀರಾವರಿ ವಲಯ ಹಂಗಾಮಿ ಕಾರ್ಮಿಕ ಸಂಘದ (ಟಿಯುಸಿಐ) ಅಧ್ಯಕ್ಷ ಆರ್. ಮಾನಸಯ್ಯ ಒತ್ತಾಯಿಸಿದರು.

ನಗರದಪತ್ರಿಕಾಭವನದಲ್ಲಿಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತುಂಗಭದ್ರಾ ಎಡದಂಡೆ ಕಾಲುವೆಯ ನೀರು ಸರಬರಾಜು ಮತ್ತು 12 ಶಿಬಿರಗಳ ನಿರ್ವಹಣೆ ಗುತ್ತಿಗೆ ಗ್ಯಾಂಗ್‌ಮ್ಯಾನ್ ಕಾರ್ಮಿಕರ ಶ್ರಮದ ಮೇಲೆಯೇ ಅವಲಂಬಿತವಾಗಿದೆ. ನೀರಿನ ತುರ್ತು ಸಂದರ್ಭಗಳಲ್ಲಿ ಹಗಲಿರುಳು ದುಡಿಯುವ ಇವರಿಗೆ ಪ್ರತಿ ತಿಂಗಳು ವೇತನ ನೀಡದೆ, ಮೂರು ಅಥವಾ ಆರು ತಿಂಗಳಿಗೊಮ್ಮೆ ಪಾವತಿಸಲಾಗುತ್ತಿದೆ ಎಂದು ಆರೋಪಿಸಿದರು.

2025ರ ಏಪ್ರಿಲ್ 10ರಿಂದ ಜೂನ್ 30ರವರೆಗೆ ಕೆಲಸ ಮಾಡಿದ 222 ಕಾರ್ಮಿಕರ 80 ದಿನಗಳ ವೇತನವನ್ನು ತಡೆಹಿಡಿಯಲಾಗಿದೆ. ಈ ಸಂಬಂಧ ಸಿರವಾರದ ವಿಜಯಲಕ್ಷ್ಮಿ ಪಾಟೀಲ, ಸಿಂಧನೂರಿನ ಸತ್ಯನಾರಾಯಣ ಶೆಟ್ಟಿ ಹಾಗೂ ಯರಮರಸ್ ವಿಭಾಗದ ಕಾರ್ಯಪಾಲಕ ಅಭಿಯಂತರರ ವಿರುದ್ಧ ಸಂಘವು ವೇತನ ಪಾವತಿ ಕಾಯ್ದೆಯಡಿ ದಾವೆ ಹೂಡಿತ್ತು ಎಂದು ವಿವರಿಸಿದರು.

ಪ್ರಕರಣದ ವಿಚಾರಣೆ ಬಳಿಕ ಸೆಪ್ಟೆಂಬರ್ 22ರಂದು ಕಲಬುರಗಿಯ ಉಪ ಕಾರ್ಮಿಕ ಆಯುಕ್ತರ ಪ್ರಾಧಿಕಾರವು ಪ್ರತಿ ಕಾರ್ಮಿಕರಿಗೆ ₹40 ಸಾವಿರ ವೇತನ ಮತ್ತು ₹5,500 ಪರಿಹಾರ ಸೇರಿ ಒಟ್ಟು ₹1,01,01,000 ಹಣವನ್ನು ಒಂದು ತಿಂಗಳೊಳಗೆ ಪ್ರಾಧಿಕಾರದ ಖಾತೆಗೆ ಜಮೆ ಮಾಡುವಂತೆ ಆದೇಶಿಸಿದೆ ಎಂದು ತಿಳಿಸಿದರು.

ಕಾರ್ಮಿಕರು ಕೆಲಸ ಮಾಡಿಲ್ಲವೆಂದು ತೋರಿಸಿ ಅವರ ನ್ಯಾಯಬದ್ಧ ಕೂಲಿಯನ್ನು ನಿರಾಕರಿಸಲಾಗಿದೆ. ವರ್ಷಪೂರ್ತಿ ಕೆಲಸದ ಆದೇಶವಿದ್ದರೂ ನೀರು ನಿಲುಗಡೆ ಅವಧಿಯ ವೇತನ ನೀಡದಿರುವುದು ಅನ್ಯಾಯವಾಗಿದೆ. ನ್ಯಾಯ ಪ್ರಾಧಿಕಾರದ

2ನೇ ಪುಟಕ್ಕೆ

## ಕನ್ನಡಿಗರ ಹಕ್ಕುಗಳ ರಕ್ಷಣೆಗೆ ಸ್ವಾಭಿಮಾನಿ ಕನ್ನಡಿಗ ಸಂಘಟನೆ ಸ್ಥಾಪನೆ: ವೆಂಕಟೇಶ್ ಮಲ್ಲದೇವರ ಗುಡ್ಡ



ರಾಯಚೂರು: ಕನ್ನಡ ನಾಡು, ನುಡಿ, ನೆಲ, ಜಲ ಹಾಗೂ ಕನ್ನಡಿಗರ ಹಕ್ಕುಗಳ ರಕ್ಷಣೆಗಾಗಿ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಕನ್ನಡಿಗ (ರಿ) ಎಂಬ ನೂತನ ರಾಜ್ಯಮಟ್ಟದ ಸಂಘಟನೆಯನ್ನು ಸ್ಥಾಪಿಸಲಾಗಿದ್ದು, ರಾಜ್ಯಾದ್ಯಂತ ಸಂಘಟನೆಯನ್ನು ವಿಸ್ತರಿಸಿ ಕನ್ನಡಪರ ಹೋರಾಟಗಳನ್ನು ರೂಪಿಸಲಾಗುವುದು ಎಂದು ವೆಂಕಟೇಶ್ ಮಲ್ಲದೇವರ ಗುಡ್ಡ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕನ್ನಡ ಭಾಷೆ, ಸಂಸ್ಕೃತಿ ಹಾಗೂ ರಾಜ್ಯದ ಹಿತಾಸಕ್ತಿಗಳನ್ನು ಕಾಪಾಡುವುದು ಸಂಘಟನೆಯ ಪ್ರಮುಖ ಉದ್ದೇಶವಾಗಿದೆ. ಕನ್ನಡಿಗರ ಸಮಸ್ಯೆಗಳಿಗೆ ಸ್ಪಂದಿಸುವುದರ ಜೊತೆಗೆ ಅವರ ನ್ಯಾಯಯುತ ಹಕ್ಕುಗಳಿಗಾಗಿ ಹೋರಾಟ ನಡೆಸಲಾಗುವುದು ಎಂದರು.

ರಾಜ್ಯದ ಜಿಲ್ಲೆ, ತಾಲೂಕು, ಹೋಬಳಿ ಹಾಗೂ ಗ್ರಾಮಮಟ್ಟದಲ್ಲಿ ಸಂಘಟನೆಯ ಘಟಕಗಳನ್ನು ಸ್ಥಾಪಿಸಿ, ಜನರಲ್ಲಿ ಕನ್ನಡ ಭಾಷೆ ಮತ್ತು ಸಂಸ್ಕೃತಿಯ ಬಗ್ಗೆ ಜಾಗೃತಿ ಮೂಡಿಸಲಾಗುವುದು. ನವೆಂಬರ್‌ನಲ್ಲಿ ಕನ್ನಡ ರಾಜ್ಯೋತ್ಸವದ ಅಂಗವಾಗಿ ಸಿಂಧನೂರು ನಗರದಲ್ಲಿ ರಾಜ್ಯ, ಜಿಲ್ಲಾ ಹಾಗೂ ತಾಲೂಕು ಮಟ್ಟದ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ಹಮ್ಮಿಕೊಳ್ಳಲಾಗುವುದು ಎಂದು ಹೇಳಿದರು.

ರಾಜ್ಯದಲ್ಲಿ ಮಳೆ ಕೊರತೆಯಿಂದ ಬರಗಾಲದ ಪರಿಸ್ಥಿತಿ ನಿರ್ಮಾಣವಾಗಿದ್ದು, ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಸಕಾಲಕ್ಕೆ ಮಳೆಯಾಗದೆ ಬೆಳೆಗಳು ಒಣಗುತ್ತಿವೆ. ನೀರಿನ ಮೂಲಗಳು ಬತ್ತುತ್ತಿರುವುದರಿಂದ ಕೃಷಿ ಚಟುವಟಿಕೆಗಳಿಗೂ ತೀವ್ರ ಹಿನ್ನಡೆಯಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಬೆಳೆ ನಷ್ಟದಿಂದಾಗಿ ಬ್ಯಾಂಕ್ ಹಾಗೂ ಹಣಕಾಸು ಸಂಸ್ಥೆಗಳಿಂದ ಪಡೆದ ಸಾಲವನ್ನು ಮರುಪಾವತಿಸಲು ರೈತರು ಪರದಾಡುತ್ತಿದ್ದಾರೆ. ಗ್ರಾಮೀಣ ಪ್ರದೇಶಗಳಲ್ಲಿ ಉದ್ಯೋಗ ಮತ್ತು ಆದಾಯದ ಕೊರತೆಯಿಂದ ಅನೇಕ ಕುಟುಂಬಗಳು ಜೀವನೋಪಾಯಕ್ಕಾಗಿ ನಗರ ಪ್ರದೇಶಗಳಿಗೆ ಗುಳೆ ಹೋಗುವ ಪರಿಸ್ಥಿತಿ ಎದುರಾಗಿದೆ. ಸರ್ಕಾರ ಕೂಡಲೇ ರೈತರ ನೆರವಿಗೆ ಧಾವಿಸಿ ₹5 ಲಕ್ಷದವರೆಗಿನ ಕೃಷಿ ಸಾಲ ಮನ್ನಾ ಮಾಡಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ

2ನೇ ಪುಟಕ್ಕೆ

## ಸೈಕಲ್ ಮೂಲಕ ಕರ್ತವ್ಯಕ್ಕೆ ತೆರಳುವ ಅಭಿಯಾನಕ್ಕೆ 60 ದಿನ ಪೂರೈಸಿದ ಡಾ. ಬಸವರಾಜ್ ಪಾಟೀಲ್



ರಾಯಚೂರು, ಅ.13: ಪರಿಸರ ಸಂರಕ್ಷಣೆ, ಆರೋಗ್ಯ ಜಾಗೃತಿ ಹಾಗೂ ನಶಾಮುಕ್ತ ಸಮಾಜ ನಿರ್ಮಾಣದ ಸಂದೇಶದೊಂದಿಗೆ ಪ್ರತಿನಿತ್ಯ ಸೈಕಲ್ ಮೂಲಕ ಕರ್ತವ್ಯಕ್ಕೆ ತೆರಳುತ್ತಿರುವ ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ರಿಮ್ಸ್)ಯ ಜನರಲ್ ಮೆಡಿಸಿನ್ ವಿಭಾಗದ ಮುಖ್ಯಸ್ಥ ಡಾ. ಎಂ. ಬಸವರಾಜ್ ಪಾಟೀಲ್ ಅವರ ಸೈಕಲ್ ಪ್ರಯಾಣದ ಅಭಿಯಾನ ಮಂಗಳವಾರ 60 ದಿನಗಳನ್ನು ಪೂರ್ಣಗೊಳಿಸಿದೆ.

ಆಗಸ್ಟ್ 15ರಂದು ಸ್ವಾತಂತ್ರ್ಯ ದಿನಾಚರಣೆಯ ಸಂದರ್ಭದಲ್ಲಿ ತಮ್ಮ ಮನೆಯಿಂದ ರಿಮ್ಸ್ ವೈದ್ಯಕೀಯ ಕಾಲೇಜು ಹಾಗೂ ಕಚೇರಿಗೆ ಸೈಕಲ್ ಮೂಲಕ ತೆರಳುವ ಅಭಿಯಾನ ಆರಂಭಿಸಿದ್ದ ಅವರು, ಕಳೆದ 60 ದಿನಗಳಿಂದ ಸೈಕಲ್ ಬಳಕೆಯ ಮಹತ್ವದ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುತ್ತಿದ್ದಾರೆ.

ಭಾರತೀಯ ವೈದ್ಯಕೀಯ ಸಂಘದ ಅಧ್ಯಕ್ಷರಾಗಿಯೂ ಕಾರ್ಯನಿರ್ವಹಿಸುತ್ತಿರುವ ಡಾ. ಬಸವರಾಜ್ ಪಾಟೀಲ್ ಅವರು ರಾಯಚೂರು ಸೈಕಲ್ ಅಸೋಸಿಯೇಷನ್‌ನ ಪ್ರಮುಖರಾಗಿದ್ದಾರೆ. ಮಧುಮೇಹ ಚಿಕಿತ್ಸಾ ಕ್ಷೇತ್ರದಲ್ಲಿ ಗುರುತಿಸಿಕೊಂಡಿರುವ ಅವರು, ಲಯನ್ಸ್ ಕ್ಲಬ್ ಹಾಗೂ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಚಟುವಟಿಕೆಗಳಲ್ಲಿಯೂ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ.

ವೈದ್ಯಕೀಯ ಸೇವೆಯ ಜೊತೆಗೆ ಪರಿಸರ ಸಂರಕ್ಷಣೆ, ಆರೋಗ್ಯಕರ ಜೀವನಶೈಲಿ ಹಾಗೂ ನಶಾಮುಕ್ತ ಭಾರತದ ಪರಿಕಲ್ಪನೆಯನ್ನು ಜನರಿಗೆ ತಲುಪಿಸುವ ಉದ್ದೇಶದಿಂದ ಅವರು ಸೈಕಲ್ ಪ್ರಯಾಣಕ್ಕೆ ಆದ್ಯತೆ ನೀಡಿದ್ದಾರೆ. ನಶಾಮುಕ್ತ ಕರ್ನಾಟಕ ಹಾಗೂ ನಶಾಮುಕ್ತ ರಾಯಚೂರು ನಿರ್ಮಾಣದ ಸಂದೇಶವನ್ನು ತಮ್ಮ ಅಭಿಯಾನದ ಮೂಲಕ ಸಾರುತ್ತಿದ್ದಾರೆ.

ಅನುಭವಿ ಸೈಕಲ್ ಸವಾರರಾಗಿರುವ ಡಾ. ಬಸವರಾಜ್ ಪಾಟೀಲ್ ಅವರು ಈ ಹಿಂದೆಯೂ ನೂರಾರು ಹಾಗೂ ಸಾವಿರಾರು ಕಿಲೋಮೀಟರ್‌ಗಳ ಸೈಕಲ್ ಪ್ರಯಾಣ ಕೈಗೊಂಡಿದ್ದಾರೆ. ಬಿಡುವಿಲ್ಲದ ವೈದ್ಯಕೀಯ ವೃತ್ತಿಯ ನಡುವೆಯೂ ಸೈಕಲ್ ಸವಾರಿಯನ್ನು ದಿನನಿತ್ಯದ ಜೀವನದ ಭಾಗವನ್ನಾಗಿ ಮಾಡಿಕೊಂಡಿರುವುದು

2ನೇ ಪುಟಕ್ಕೆ

## ಮಾಹಿತಿ ಹಕ್ಕು ಕಾಯ್ದೆಯ ಆಶಯ ಈಡೇರಿಸಲು ಆಯೋಗ ಬದ್ಧ: ಬಿ. ವೆಂಕಟ ಸಿಂಗ್

ಕಲಬುರಗಿ, ಅ.13: ಆಡಳಿತದಲ್ಲಿ ಪಾರದರ್ಶಕತೆ, ಉತ್ತರದಾಯಿತ್ವ ಹಾಗೂ ಸಾರ್ವಜನಿಕರ ಸಹಭಾಗಿತ್ವವನ್ನು ಹೆಚ್ಚಿಸುವ ಉದ್ದೇಶದಿಂದ ಜಾರಿಗೆ ಬಂದಿರುವ ಮಾಹಿತಿ ಹಕ್ಕು ಕಾಯ್ದೆಯ ಆಶಯಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಕರ್ನಾಟಕ ಮಾಹಿತಿ ಆಯೋಗವು ತಂಡವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತ ಬಿ. ವೆಂಕಟ ಸಿಂಗ್ ತಿಳಿಸಿದರು.



ನಗರದ ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದಲ್ಲಿ ಸೋಮವಾರ ಸಂಜೆ ಆಯೋಜಿಸಿದ್ದ ಮಾಹಿತಿ ಹಕ್ಕು ಕಾಯ್ದೆ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮಾಹಿತಿ ಹಕ್ಕು ಕಾಯ್ದೆಯು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜನಸಾಮಾನ್ಯರಿಗೆ ಆಡಳಿತದ ಕುರಿತು ಮಾಹಿತಿ ಪಡೆಯುವ ಅಧಿಕಾರ ನೀಡಿದೆ. ಸರ್ಕಾರಿ ಇಲಾಖೆಗಳ ಕಾರ್ಯವೈಖರಿಯಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಲು, ಭ್ರಷ್ಟಾಚಾರ ನಿಯಂತ್ರಿಸಲು ಹಾಗೂ ಆಡಳಿತದ ಮೇಲೆ ನಾಗರಿಕರು ನಿಗಾ ವಹಿಸಲು ಈ ಕಾಯ್ದೆ ಪ್ರಮುಖ ಸಾಧನವಾಗಿದೆ ಎಂದು ಹೇಳಿದರು.

2005ರ ಅಕ್ಟೋಬರ್ 12ರಂದು ದೇಶದಲ್ಲಿ ಜಾರಿಗೆ ಬಂದ ಮಾಹಿತಿ ಹಕ್ಕು ಕಾಯ್ದೆಯು ಆಡಳಿತ ವ್ಯವಸ್ಥೆಯಲ್ಲಿ ಮಹತ್ವದ ಬದಲಾವಣೆಗೆ ಕಾರಣವಾಗಿದೆ. ಸರ್ಕಾರಿ ಅಧಿಕಾರಿಗಳನ್ನು ಸಾರ್ವಜನಿಕರಿಗೆ ಉತ್ತರದಾಯಿಗಳನ್ನಾಗಿ ಮಾಡುವಲ್ಲಿ ಕಾಯ್ದೆ ಪರಿಣಾಮಕಾರಿ ಪಾತ್ರ ವಹಿಸಿದೆ. ಆದಾಗ್ಯೂ, ಕಾಯ್ದೆಯ ಉದ್ದೇಶಗಳು ಸಂಪೂರ್ಣವಾಗಿ ಈಡೇರಬೇಕಾದರೆ ಅಧಿಕಾರಿಗಳು ತಮ್ಮ ಜವಾಬ್ದಾರಿಗಳನ್ನು ಮತ್ತಷ್ಟು ಪರಿಣಾಮಕಾರಿಯಾಗಿ ನಿರ್ವಹಿಸುವ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟರು.

ಸಾರ್ವಜನಿಕರು ಸರ್ಕಾರಿ ಇಲಾಖೆಗಳ ಕಾರ್ಯಚಟುವಟಿಕೆಗಳ

2ನೇ ಪುಟಕ್ಕೆ

# ಕೃಷಿ ವಿಶ್ವವಿದ್ಯಾಲಯದಲ್ಲಿ ಅ.14ರಿಂದ ಅಂತರ್‌ಮಹಾವಿದ್ಯಾಲಯಗಳ ಕ್ರೀಡಾಕೂಟ

ರಾಯಚೂರು, ಅ.13: ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ 202627ನೇ ಸಾಲಿನ ಅಂತರ್‌ಮಹಾವಿದ್ಯಾಲಯಗಳ ಕ್ರೀಡಾಕೂಟವು ಅಕ್ಟೋಬರ್ 14ರಿಂದ 18ರವರೆಗೆ ಐದು ದಿನಗಳ ಕಾಲ ರಾಯಚೂರಿನ ವಿಶ್ವವಿದ್ಯಾಲಯದ ಆವರಣದಲ್ಲಿ ನಡೆಯಲಿದ್ದು, ವಿವಿಧ ಮಹಾವಿದ್ಯಾಲಯಗಳ ಒಟ್ಟು 455 ವಿದ್ಯಾರ್ಥಿಗಳು ಭಾಗವಹಿಸಲಿದ್ದಾರೆ.

ವಿಶ್ವವಿದ್ಯಾಲಯದ ಕುಲಪತಿ ಡಾ. ಎಂ. ಹನುಮಂತಪ್ಪ ಅವರು ಅಕ್ಟೋಬರ್ 14ರಂದು ಕ್ರೀಡಾಕೂಟಕ್ಕೆ ಚಾಲನೆ ನೀಡಲಿದ್ದಾರೆ. ವಿಶ್ವವಿದ್ಯಾಲಯದ ಅಧಿಕಾರಿಗಳು, ವಿವಿಧ ವಿಭಾಗಗಳ ಮುಖ್ಯಸ್ಥರು, ಅಧ್ಯಾಪಕರು ಹಾಗೂ ದೈಹಿಕ ಶಿಕ್ಷಣ ವಿಭಾಗದ ಸಿಬ್ಬಂದಿ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ವಿದ್ಯಾರ್ಥಿಗಳಲ್ಲಿ ಕ್ರೀಡಾಸ್ಫೂರ್ತಿ, ದೈಹಿಕ ಸಾಮರ್ಥ್ಯ, ಶಿಸ್ತು, ನಾಯಕತ್ವ ಹಾಗೂ ತಂಡದ ಮನೋಭಾವವನ್ನು ಬೆಳೆಸುವ ಉದ್ದೇಶದಿಂದ ಈ ಕ್ರೀಡಾಕೂಟವನ್ನು ಆಯೋಜಿಸಲಾಗಿದೆ. ಪಠ್ಯಾಧ್ಯಯನದ ಜೊತೆಗೆ ಕ್ರೀಡಾ ಚಟುವಟಿಕೆಗಳಲ್ಲಿ ವಿದ್ಯಾರ್ಥಿಗಳು ಸಕ್ರಿಯವಾಗಿ ಪಾಲ್ಗೊಳ್ಳಲು ಅವಕಾಶ ಕಲ್ಪಿಸುವುದು ಪಂದ್ಯಾವಳಿಯ ಪ್ರಮುಖ ಉದ್ದೇಶವಾಗಿದೆ.

ಕ್ರೀಡಾಕೂಟದಲ್ಲಿ ಕಬಡ್ಡಿ, ಖೋ-ಖೋ, ವಾಲಿಬಾಲ್, ಟೇಬಲ್ ಟೆನಿಸ್ ಹಾಗೂ ಲಾನ್ ಟೆನಿಸ್ ಸೇರಿದಂತೆ ವಿವಿಧ ಕ್ರೀಡೆಗಳಲ್ಲಿ ಸ್ಪರ್ಧೆಗಳು ನಡೆಯಲಿವೆ. ನಾಕೌಟ್ ಮಾದರಿಯಲ್ಲಿ ಪಂದ್ಯಾವಳಿಗಳನ್ನು ಆಯೋಜಿಸಲಾಗಿದ್ದು, ವಿವಿಧ ಮಹಾವಿದ್ಯಾಲಯಗಳ ತಂಡಗಳು ತಮ್ಮ ಕ್ರೀಡಾ ಕೌಶಲ್ಯವನ್ನು ಪ್ರದರ್ಶಿಸಲಿವೆ.

ರಾಯಚೂರು, ಕಲಬುರಗಿ, ಭೀಮರಾಯನಗುಡಿ, ಗಂಗಾವತಿ ಹಾಗೂ ಹಗರಿಯ ಕೃಷಿ ಮಹಾವಿದ್ಯಾಲಯಗಳು ಮತ್ತು ರಾಯಚೂರಿನ ಕೃಷಿ ತಾಂತ್ರಿಕ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಸ್ಪರ್ಧೆಗಳಲ್ಲಿ ಭಾಗವಹಿಸಲಿದ್ದಾರೆ. ಒಟ್ಟು 245 ವಿದ್ಯಾರ್ಥಿಗಳು ಹಾಗೂ 210 ವಿದ್ಯಾರ್ಥಿನಿಯರು ಸೇರಿದಂತೆ 455 ಕ್ರೀಡಾಪಟುಗಳು ವಿವಿಧ ಕ್ರೀಡಾ ವಿಭಾಗಗಳಲ್ಲಿ ತಮ್ಮ ಸಾಮರ್ಥ್ಯ ಪ್ರದರ್ಶಿಸಲಿದ್ದಾರೆ.

ಐದು ದಿನಗಳ ಕಾಲ ನಡೆಯಲಿರುವ ಪಂದ್ಯಾವಳಿಗಳಿಗೆ ವಿಶ್ವವಿದ್ಯಾಲಯದ ಆವರಣದಲ್ಲಿ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ. ಹೊರ ಜಿಲ್ಲೆಗಳಿಂದ ಆಗಮಿಸುವ ಕ್ರೀಡಾಪಟುಗಳಿಗೆ ವಸತಿ, ಊಟ, ಪ್ರಥಮ ಚಿಕಿತ್ಸೆ ಸೇರಿದಂತೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ಸ್ಪರ್ಧೆಗಳು ಸುಗಮವಾಗಿ ನಡೆಯಲು ವಿಶ್ವವಿದ್ಯಾಲಯದ ಅಧಿಕಾರಿಗಳು, ಅಧ್ಯಾಪಕರು, ದೈಹಿಕ ಶಿಕ್ಷಣ ವಿಭಾಗದ ಸಿಬ್ಬಂದಿ ಹಾಗೂ ಸಂಘಟಕರು ವ್ಯವಸ್ಥೆ ಮಾಡಿಕೊಂಡಿದ್ದಾರೆ.

ವಿದ್ಯಾರ್ಥಿಗಳಲ್ಲಿ ಆರೋಗ್ಯಕರ ಸ್ಪರ್ಧಾತ್ಮಕ ಮನೋಭಾವ ಬೆಳೆಸುವುದರ ಜೊತೆಗೆ ವಿವಿಧ ಮಹಾವಿದ್ಯಾಲಯಗಳ ವಿದ್ಯಾರ್ಥಿಗಳ ನಡುವೆ ಪರಸ್ಪರ ಪರಿಚಯ, ಸಹಕಾರ ಹಾಗೂ ಸೌಹಾರ್ದತೆಯನ್ನು ವೃದ್ಧಿಸಲು ಈ ಕ್ರೀಡಾಕೂಟ ಸಹಕಾರಿಯಾಗಲಿದೆ.

ಕ್ರೀಡಾಪಟುಗಳು ಸೋಲು-ಗೆಲುವನ್ನು ಸಮಾನವಾಗಿ ಸ್ವೀಕರಿಸಿ ಕ್ರೀಡಾ ಮನೋಭಾವದಿಂದ ಸ್ಪರ್ಧೆಗಳಲ್ಲಿ ಭಾಗವಹಿಸಬೇಕು. ವಿದ್ಯಾರ್ಥಿಗಳ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸಲು ವಿಶ್ವವಿದ್ಯಾಲಯವು ಇಂತಹ ಕ್ರೀಡಾ ಚಟುವಟಿಕೆಗಳಿಗೆ ಆದ್ಯತೆ ನೀಡುತ್ತಿದೆ ಎಂದು ವಿಶ್ವವಿದ್ಯಾಲಯದ ಡೀನ್ (ವಿದ್ಯಾರ್ಥಿ ಕ್ಷೇಮಾಭಿವೃದ್ಧಿ) ಡಾ. ರಾಜಣ್ಣ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಂ.ಕೆ.ಮಸಾನೆ ನಿಧನ



ರಾಯಚೂರು: ಪ್ರಜಾವಾಣಿ ಜಿಲ್ಲಾ ವರದಿಗಾರ ಚಂದ್ರಕಾಂತ ಮಸಾನೆ ಅವರ ತಂದೆ

ಮಲ್ಲಪ್ಪ ಮಸಾನೆ (90) ಮಂಗಳವಾರ ಪುಣೆಯಲ್ಲಿ ನಿಧನ ಹೊಂದಿದ್ದಾರೆ.

ಅವರಿಗೆ ಪತ್ರಕರ್ತ ಚಂದ್ರಕಾಂತ, ಇನ್ಫೋಸಿಸ್ ಸಾಫ್ಟವೇರ್ ಎಂಜಿನಿಯರ್ ಶಶಿಕಾಂತ, ಔಷಧ ವಿಶ್ಲೇಷಕ ಸಂಜಯ ಸೇರಿ ಮೂವರು ಪುತ್ರರು ಹಾಗೂ ಇಬ್ಬರು ಪುತ್ರಿಯರು ಇದ್ದಾರೆ.

ಮೃತರ ಅಂತ್ಯಕ್ರಿಯೆ ಪುಣೆಯ ಕಾಸರಅಂಬೋಲಿಯಲ್ಲಿ ನಡೆಯಿತು.

**ಅಮೃತ ವಾಣಿ**

**ಅಂತರಂಗದ ಪುಸ್ತಕ ತೆರೆಯುವ ತನಕ ಉಳಿದೆಲ್ಲ ಪುಸ್ತಕಗಳು ಉಪಯೋಗಕ್ಕೆ ಬಾರದು.**

**1615 ನೆಯ ದಿನಕ್ಕೆ ಏಮ್ಸ್ ಹೋರಾಟ**

# ಅಂಬಾಭವಾನಿ ಮಂದಿರದಲ್ಲಿ ನವರಾತ್ರಿ ಪಲ್ಲಕ್ಕಿ ಉತ್ಸವಕ್ಕೆ ಚಾಲನೆ



ಸಿರವಾರ, ಅ.13: ಪಟ್ಟಣದ ಶ್ರೀ ಅಂಬಾಭವಾನಿ ಮಂದಿರದಲ್ಲಿ ದಸರಾ ಮಹೋತ್ಸವದ ಅಂಗವಾಗಿ ಭಾವಸಾರ ಕ್ಷತ್ರಿಯ ಸಮಾಜದ ವತಿಯಿಂದ ನವರಾತ್ರಿ ವಿಶೇಷ ಪೂಜೆ ಹಾಗೂ ಪಲ್ಲಕ್ಕಿ ಉತ್ಸವಕ್ಕೆ ಶ್ರದ್ಧಾಭಕ್ತಿಯಿಂದ ಚಾಲನೆ ನೀಡಲಾಯಿತು.

ಭಾನುವಾರ ದೇವಸ್ಥಾನದಲ್ಲಿ ಸಮಾಜದ ಮುಖಂಡರು, ಮಹಿಳೆಯರು ಹಾಗೂ ಭಕ್ತರ ಸಮ್ಮುಖದಲ್ಲಿ ಅಂಬಾಭವಾನಿ ದೇವಿಯ ಮೂರ್ತಿಗೆ ಅಭಿಷೇಕ, ವಿಶೇಷ ಪೂಜೆ ಹಾಗೂ ಆಕರ್ಷಕ ಅಲಂಕಾರ ಸೇವೆ ನೆರವೇರಿಸಲಾಯಿತು. ನವರಾತ್ರಿ ಉತ್ಸವದ ಹಿನ್ನೆಲೆಯಲ್ಲಿ ದೇವಸ್ಥಾನದಲ್ಲಿ ಭಕ್ತಿಭಾವದ ವಾತಾವರಣ ನಿರ್ಮಾಣವಾಗಿದ್ದು, ಭಕ್ತರು ದೇವಿಯ ದರ್ಶನ ಪಡೆದು ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಭಾವಸಾರ ಕ್ಷತ್ರಿಯ ಸಮಾಜದ ತಾಲೂಕು ಅಧ್ಯಕ್ಷ ಲಕ್ಷ್ಮೀಕಾಂತ್ ಮಹೇಂದ್ರಕರ್ ಮಾತನಾಡಿ, ಪಟ್ಟಣದ ಶ್ರೀ ಅಂಬಾಭವಾನಿ ದೇವಸ್ಥಾನ ನಿರ್ಮಾಣಗೊಂಡು 20 ವರ್ಷಗಳು ಪೂರ್ಣಗೊಂಡಿವೆ. ದೇವಸ್ಥಾನದ ಆರಂಭದಿಂದಲೂ ಭಾವಸಾರ ಕ್ಷತ್ರಿಯ ಸಮಾಜದ ಬಾಂಧವರು ಹಾಗೂ ಸ್ಥಳೀಯ ಸಾರ್ವಜನಿಕರ ಸಹಕಾರದೊಂದಿಗೆ ಆಷಾಢ ಮತ್ತು ದಸರಾ ಮಹೋತ್ಸವಗಳನ್ನು ಸಂಪ್ರದಾಯಬದ್ಧವಾಗಿ ಆಚರಿಸಿಕೊಂಡು ಬರಲಾಗುತ್ತಿದೆ ಎಂದು ತಿಳಿಸಿದರು.

ಧಾರ್ಮಿಕ ಆಚರಣೆಗಳು ಸಮಾಜದಲ್ಲಿ ಒಗ್ಗಟ್ಟು, ಪರಸ್ಪರ ಸಹಕಾರ ಹಾಗೂ ಸಾಂಸ್ಕೃತಿಕ ಮೌಲ್ಯಗಳನ್ನು ಉಳಿಸಿ ಬೆಳೆಸಲು ಸಹಕಾರಿಯಾಗುತ್ತವೆ. ಅಂಬಾಭವಾನಿ ದೇವಿಯ ಆರಾಧನೆಯೊಂದಿಗೆ ಸಮಾಜದ ಬಾಂಧವರು ಒಗ್ಗಟ್ಟಿನಿಂದ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುತ್ತಿರುವುದು ಸಂತಸದ ವಿಷಯವಾಗಿದೆ ಎಂದು ಹೇಳಿದರು.

ದೇವಸ್ಥಾನದ ಅಭಿವೃದ್ಧಿಗೆ ಸಮಾಜದ ಮುಖಂಡರು ಹಾಗೂ ಭಕ್ತರು ನಿರಂತರ ಸಹಕಾರ ನೀಡುತ್ತಿದ್ದಾರೆ. ಶಾಸಕರು, ಸರ್ಕಾರ ಮತ್ತು ದಾನಿಗಳ ನೆರವಿನಿಂದ ದೇವಸ್ಥಾನದ ಅಭಿವೃದ್ಧಿ ಕಾರ್ಯಗಳನ್ನು ಹಂತ ಹಂತವಾಗಿ ಕೈಗೊಳ್ಳಲಾಗುತ್ತಿದೆ. ಮುಂದಿನ ದಿನಗಳಲ್ಲಿಯೂ ದೇವಸ್ಥಾನದ ಅಭಿವೃದ್ಧಿಗೆ ಎಲ್ಲರ ಸಹಕಾರ ಅಗತ್ಯವಾಗಿದೆ ಎಂದು ಮನವಿ ಮಾಡಿದರು.

ನವರಾತ್ರಿ ಉತ್ಸವದ ಅಂಗವಾಗಿ ದೇವಿಗೆ ವಿಶೇಷ ಪೂಜೆ ಸಲ್ಲಿಸಿದ ಭಕ್ತರು ಕುಟುಂಬದ ಸುಖ, ಶಾಂತಿ ಹಾಗೂ ಸಮೃದ್ಧಿಗಾಗಿ ಪ್ರಾರ್ಥಿಸಿದರು. ಮಹಿಳೆಯರು ಮತ್ತು ಮಕ್ಕಳು ಸೇರಿದಂತೆ ಸಮಾಜದ ಬಾಂಧವರು ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಿದರು.

ಈ ಸಂದರ್ಭದಲ್ಲಿ ದೇವಸ್ಥಾನದ ಅರ್ಚಕ ಯಲಗುರ್ದಾಚಾರ್ ಜೋಶಿ, ಸಮಾಜದ ಗೌರವಾಧ್ಯಕ್ಷ ಕಾಶಿನಾಥ್ ಸರೋದೆ, ದೇವಣ್ಣ ಮಹೇಂದ್ರಕರ್, ತುಳಜಾರಾಮ್ ನೀರ್ಮ್ಕರ್, ಬಾಬುರಾವ್ ಹಂಚಾಟೆ, ಕೃಷ್ಣಾಜಿರಾವ್ ಸೂರ್ಯವಂಶಿ ಸೇರಿದಂತೆ ಭಾವಸಾರ ಕ್ಷತ್ರಿಯ ಸಮಾಜದ ಮುಖಂಡರು, ಮಹಿಳೆಯರು, ಮಕ್ಕಳು ಹಾಗೂ ಭಕ್ತರು ಉಪಸ್ಥಿತರಿದ್ದರು.

# ಕುರ್ಡಿ ಜಿ.ಪಂ ಕ್ಷೇತ್ರದ ಬಿಜೆಪಿ ಟಿಕೆಟ್‌ಗೆ ಭೀಮಯ್ಯ ನಾಯಕ ಆರೋಲಿ ಆಕಾಂಕ್ಷಿ



ಮಾನ್ವಿ: ಮುಂಬರುವ ಜಿಲ್ಲಾ ಪಂಚಾಯಿತಿ ಚುನಾವಣೆ ಹಿನ್ನೆಲೆಯಲ್ಲಿ ಕುರ್ಡಿ ಕ್ಷೇತ್ರದಲ್ಲಿ ರಾಜಕೀಯ ಚಟುವಟಿಕೆಗಳು ಚುರುಕುಗೊಂಡಿದ್ದು, ಕಾಂಗ್ರೆಸ್‌ನ ಮಾಜಿ ನಿಷ್ಠಾವಂತ ಕಾರ್ಯಕರ್ತ ಭೀಮಯ್ಯ ನಾಯಕ ಆರೋಲಿ ಅವರು ಬಿಜೆಪಿ ಟಿಕೆಟ್‌ಗಾಗಿ ಪ್ರಬಲ ಆಕಾಂಕ್ಷಿಯಾಗಿ ಗುರುತಿಸಿಕೊಳ್ಳುತ್ತಿದ್ದಾರೆ.

ಹಲವು ವರ್ಷಗಳಿಂದ ಕಾಂಗ್ರೆಸ್ ಪಕ್ಷದಲ್ಲಿ ಸಕ್ರಿಯವಾಗಿ ಕಾರ್ಯನಿರ್ವಹಿಸಿದ್ದ ಭೀಮಯ್ಯ ನಾಯಕ ಆರೋಲಿ, ಪಕ್ಷದ ಸಂಘಟನೆಗಾಗಿ ಶ್ರಮಿಸಿದ್ದರೂ ಸೂಕ್ತ ಸ್ಥಾನಮಾನ ಹಾಗೂ ರಾಜಕೀಯ ಅವಕಾಶ ದೊರೆಯದ ಕಾರಣ ಅಸಮಾಧಾನಗೊಂಡಿದ್ದಾರೆ ಎನ್ನಲಾಗಿದೆ. ಈ ಹಿನ್ನೆಲೆಯಲ್ಲಿ ಕಾಂಗ್ರೆಸ್‌ನಿಂದ ದೂರ ಸರಿದು ಬಿಜೆಪಿ ಸೇರುವ ಮೂಲಕ ಕುರ್ಡಿ ಜಿಲ್ಲಾ ಪಂಚಾಯಿತಿ ಕ್ಷೇತ್ರದಿಂದ ಚುನಾವಣೆಗೆ ಸ್ಪರ್ಧಿಸುವ ಆಸಕ್ತಿ ಹೊಂದಿದ್ದಾರೆ ಎಂದು ಅವರ ಬೆಂಬಲಿಗರು ತಿಳಿಸಿದ್ದಾರೆ.

ಕ್ಷೇತ್ರದ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸುತ್ತಿರುವ ಅವರು, ಕುಡಿಯುವ ನೀರು, ರಸ್ತೆ, ಶಿಕ್ಷಣ, ಕೃಷಿ ಹಾಗೂ ಉದ್ಯೋಗ ಸೇರಿದಂತೆ ಗ್ರಾಮೀಣ ಭಾಗದ ಮೂಲಭೂತ ಸಮಸ್ಯೆಗಳ ಬಗ್ಗೆ ಗಮನ ಹರಿಸುತ್ತಿದ್ದಾರೆ. ಸ್ಥಳೀಯ ಮುಖಂಡರು, ಯುವಕರು ಹಾಗೂ ವಿವಿಧ ಸಮುದಾಯಗಳ ಜನರೊಂದಿಗೆ ಸಂಪರ್ಕ ಬೆಳೆಸಿಕೊಂಡಿದ್ದಾರೆ ಎನ್ನಲಾಗಿದೆ.

ತಮ್ಮ ಹಿಂದಿನ ರಾಜಕೀಯ ಅನುಭವ, ಜನಸಂಪರ್ಕ ಹಾಗೂ ಬೆಂಬಲಿಗರ ಬಲದ ಆಧಾರದಲ್ಲಿ ಬಿಜೆಪಿ ಟಿಕೆಟ್ ಪಡೆಯುವ ನಿರೀಕ್ಷೆಯಲ್ಲಿರುವ ಆರೋಲಿ, ಪಕ್ಷದ ಸ್ಥಳೀಯ ಮುಖಂಡರೊಂದಿಗೆ ಸಂಪರ್ಕದಲ್ಲಿದ್ದಾರೆ ಎಂದು ಹೇಳಲಾಗುತ್ತಿದೆ.

ಕಾಂಗ್ರೆಸ್‌ನಲ್ಲಿ ಹಲವು ವರ್ಷಗಳ ಕಾಲ ನಿಷ್ಠೆಯಿಂದ ದುಡಿದರೂ ಸೂಕ್ತ ಅವಕಾಶ ಸಿಗದ ಹಿನ್ನೆಲೆಯಲ್ಲಿ ಹೊಸ ರಾಜಕೀಯ ವೇದಿಕೆಯ ಮೂಲಕ ಸಾರ್ವಜನಿಕ ಸೇವೆ ಮುಂದುವರಿಸಲು ಅವರು ಆಸಕ್ತಿ ತೋರಿದ್ದಾರೆ ಎಂಬುದು ಬೆಂಬಲಿಗರ ಅಭಿಪ್ರಾಯವಾಗಿದೆ.

ಆದರೆ, ಭೀಮಯ್ಯ ನಾಯಕ ಆರೋಲಿ ಅವರ ಬಿಜೆಪಿ ಸೇರ್ಪಡೆ ಹಾಗೂ ಅಭ್ಯರ್ಥಿತನದ ಕುರಿತು ಪಕ್ಷದಿಂದ ಅಧಿಕೃತ ಘೋಷಣೆಯಾಗಿಲ್ಲ. ಹೀಗಾಗಿ ಕುರ್ಡಿ ಜಿಲ್ಲಾ ಪಂಚಾಯಿತಿ ಕ್ಷೇತ್ರದಲ್ಲಿ ಬಿಜೆಪಿ ಯಾರಿಗೆ ಟಿಕೆಟ್ ನೀಡಲಿದೆ ಎಂಬುದು ರಾಜಕೀಯ ವಲಯದಲ್ಲಿ ಕುತೂಹಲ ಮೂಡಿಸಿದೆ.

# ಸೈಕಲ್ ಮೂಲಕ ಕರ್ತವ್ಯಕ್ಕೆ ತೆರಳುವ ಅಭಿಯಾನಕ್ಕೆ 60 ದಿನ ಪೂರೈಸಿದ ಡಾ. ಬಸವರಾಜ್ ಪಾಟೀಲ್

ಯುವಕರು ಮತ್ತು ವಿದ್ಯಾರ್ಥಿಗಳಿಗೆ ಮಾದರಿಯಾಗಿದೆ.

ಅವರ ಪರಿಸರ ಹಾಗೂ ಆರೋಗ್ಯ ಜಾಗೃತಿ ಕಾರ್ಯವನ್ನು ಪರಿಗಣಿಸಿ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ವತಿಯಿಂದ ರಾಯಭಾರಿಯಾಗಿ ಜವಾಬ್ದಾರಿ ನೀಡುವ ಕುರಿತು ಪ್ರಸ್ತಾಪವಾಗಿದೆ ಎಂದು ತಿಳಿದುಬಂದಿದೆ. ಇದೇ ರೀತಿ, ವಿಶ್ವವಿಖ್ಯಾತ ಮೈಸೂರು ದಸರಾ ಕಾರ್ಯಕ್ರಮದಲ್ಲಿ ಸನ್ಮಾನಕ್ಕೆ ಆಯ್ಕೆ ಮಾಡಲಾಗಿದೆ ಎಂದು ಅವರ ಆಪ್ತರು ತಿಳಿಸಿದ್ದಾರೆ. ನಿರಂತರ ಸೈಕಲ್ ಪ್ರಯಾಣದ ಈ ಅಭಿಯಾನ ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್‌ನಲ್ಲಿ ದಾಖಲಾಗುವ ಆಶಯವನ್ನೂ ವ್ಯಕ್ತಪಡಿಸಲಾಗಿದೆ.

ಗಾಂಧಿ ಜಯಂತಿಯ ಸಂದರ್ಭದಲ್ಲಿ ಜಿಲ್ಲಾಧಿಕಾರಿ, ಮಹಾನಗರ ಪಾಲಿಕೆ ಆಯುಕ್ತರು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹಾಗೂ ಸಹಾಯಕ ಆಯುಕ್ತರು ಸೇರಿದಂತೆ ವಿವಿಧ ಅಧಿಕಾರಿಗಳು ಡಾ. ಬಸವರಾಜ್ ಪಾಟೀಲ್ ಅವರ ಸೈಕಲ್ ಪ್ರಯಾಣದ ಕಾರ್ಯವನ್ನು ಶ್ಲಾಘಿಸಿ ಪ್ರೋತ್ಸಾಹ ನೀಡಿದ್ದರು.

ಸೈಕಲ್ ಪ್ರಯಾಣದ 60ನೇ ದಿನದ ಅಂಗವಾಗಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಶಿಕ್ಷಣ ವಿಭಾಗದ ಜಿಲ್ಲಾ ಸಂಚಾಲಕ ಡಾ. ದಂಡಪ್ಪ ಬಿರಾದಾರ ಹಸಿರು ನಿಶಾನೆ ತೋರಿಸುವ ಮೂಲಕ ಸೈಕಲ್ ಸವಾರಿಗೆ ಚಾಲನೆ ನೀಡಿ ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಡಾ. ಬಸವರಾಜ್ ಪಾಟೀಲ್ ಅವರ ಸ್ನೇಹಿತರು, ಡಾ. ಬಿರಾದಾರ ಹಾಗೂ ಹಿತೈಷಿಗಳು ಉಪಸ್ಥಿತರಿದ್ದು, ಆರೋಗ್ಯಕರ ಸಮಾಜ ಮತ್ತು ಪರಿಸರ ಸಂರಕ್ಷಣೆಗಾಗಿ ಅವರು ಕೈಗೊಂಡಿರುವ ಜಾಗೃತಿ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

## ಮೊದಲನೇ ಪುಟದಿಂದ

# 2029ರ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಮತ್ತೊಂದು ಭಾರಿ ಸೋಲು: ಅಮಿತ್ ಶಾ ವಾಗ್ದಾಳಿ

ಪ್ರಶ್ನೆಗಳನ್ನು ಎತ್ತುತ್ತಿವೆ.

ಕಾಂಗ್ರೆಸ್ ಪಕ್ಷದ ಚುನಾವಣಾ ಹಿನ್ನಡೆಗಳ ಕುರಿತು ಮಾತನಾಡಿದ ಶಾ, ರಾಹುಲ್ ಗಾಂಧಿ ಪಕ್ಷದ ಪ್ರಮುಖ ನಾಯಕತ್ವದ ಜವಾಬ್ದಾರಿ ವಹಿಸಿಕೊಂಡ ನಂತರವೂ ನಿರೀಕ್ಷಿತ ಚುನಾವಣಾ ಯಶಸ್ಸು ದೊರೆತಿಲ್ಲ ಎಂದು ಟೀಕಿಸಿದರು. ಪಕ್ಷದ ಅಧ್ಯಕ್ಷರಾಗಿದ್ದ ಅವಧಿಯಿಂದ ಪ್ರಸ್ತುತ ಲೋಕಸಭೆಯ ವಿರೋಧ ಪಕ್ಷದ ನಾಯಕರಾಗಿರುವವರೆಗೂ ಕಾಂಗ್ರೆಸ್ ಎದುರಿಸಿರುವ ಚುನಾವಣಾ ಸೋಲುಗಳ ಬಗ್ಗೆ ಆತ್ಮಾವಲೋಕನ ಮಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಚುನಾವಣೆಯಲ್ಲಿ ಸೋಲು ಎದುರಾದಾಗ ಅದರ ಕಾರಣಗಳನ್ನು ಪರಿಶೀಲಿಸಿ ಸಂಘಟನೆಯನ್ನು ಬಲಪಡಿಸುವ ಬದಲು ಚುನಾವಣಾ ವ್ಯವಸ್ಥೆಯ ವಿರುದ್ಧ ಆರೋಪ ಮಾಡುವುದು ಸರಿಯಾದ ರಾಜಕೀಯ ಮಾರ್ಗವಲ್ಲ. ಜನರ ವಿಶ್ವಾಸ ಪಡೆಯಲು ಪಕ್ಷದ ನೀತಿಗಳು, ಕಾರ್ಯವೈಖರಿ ಹಾಗೂ ನಾಯಕತ್ವದ ಕುರಿತು ಗಂಭೀರ ಚಿಂತನೆ ನಡೆಸಬೇಕು ಎಂದು ಅಭಿಪ್ರಾಯಪಟ್ಟರು.

ಮಾಧ್ಯಮಗಳಲ್ಲಿ ಆರೋಪಗಳನ್ನು ಪ್ರಸ್ತಾಪಿಸುವುದು ಹಾಗೂ ಪದೇಪದೇ ಅದೇ ವಿಷಯಗಳನ್ನು ಮುಂದಿಡುವುದರಿಂದ ಜನರ ಮನಸ್ಸು ಗೆಲ್ಲಲು ಸಾಧ್ಯವಿಲ್ಲ. ಸಾರ್ವಜನಿಕರ ವಿಶ್ವಾಸ ಗಳಿಸಲು ಜನಪರ ರಾಜಕೀಯ ಹಾಗೂ ವಿಶ್ವಾಸಾರ್ಹ ನಾಯಕತ್ವ ಅಗತ್ಯವಾಗಿದೆ ಎಂದು ಶಾ ಹೇಳಿದರು.

ಮುಖ್ಯ ಚುನಾವಣಾ ಆಯುಕ್ತರ ವಿರುದ್ಧದ ಪ್ರತಿಭಟನೆ ಮತ್ತು ಎಸ್‌ಐಆರ್ ಪ್ರಕ್ರಿಯೆ ಕುರಿತ ವಿವಾದದ ನಡುವೆ ಅಮಿತ್ ಶಾ ಅವರ ಈ ಹೇಳಿಕೆಗಳು ಆಡಳಿತಾರೂಢ ಬಿಜೆಪಿ ಹಾಗೂ ಕಾಂಗ್ರೆಸ್ ನಡುವಿನ ರಾಜಕೀಯ ವಾಗ್ವಾದಕ್ಕೆ ಮತ್ತಷ್ಟು ತೀವ್ರತೆ ನೀಡಿವೆ.

# ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಹಣ, ಉಡುಗೊರೆ ಹಂಚಿಕೆ ಆರೋಪ: ಛಲವಾದಿ ನಾರಾಯಣಸ್ವಾಮಿ

ಮೀಸಲಾತಿ ಹೆಚ್ಚಳಕ್ಕೆ ಸಂಬಂಧಿಸಿದಂತೆ ಹೈಕೋರ್ಟ್ ನೀಡಿರುವ ತೀರ್ಪನ್ನು ಗೌರವಿಸುತ್ತೇವೆ. ಬಿಜೆಪಿ ಸರ್ಕಾರದ ಅವಧಿಯಲ್ಲಿ ಮೀಸಲಾತಿ ಪ್ರಮಾಣವನ್ನು ಶೇ.56ಕ್ಕೆ ಹೆಚ್ಚಿಸಲಾಗಿತ್ತು. ಆದರೆ ಶೇ.50ರ ಮಿತಿಯನ್ನು ಮೀರಬಾರದೆಂದು ನ್ಯಾಯಾಲಯ ತೀರ್ಪು ನೀಡಿದೆ. ದಲಿತರ ಹಿತಾಸಕ್ತಿ ಕಾಪಾಡುವಲ್ಲಿ ಕಾಂಗ್ರೆಸ್ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿದರು.

ಎಸ್‌ಸಿಎಸ್‌ಪಿ-ಟಿಎಸ್‌ಪಿ ಅನುದಾನವನ್ನು ಬೇರೆ ಉದ್ದೇಶಗಳಿಗೆ ಬಳಸಿಕೊಂಡಿರುವ ಕಾಂಗ್ರೆಸ್ ಸರ್ಕಾರ ದಲಿತ ವಿರೋಧಿ ನೀತಿ ಅನುಸರಿಸುತ್ತಿದೆ. ಮೀಸಲಾತಿ ವಿಚಾರದಲ್ಲಿ ಸರ್ಕಾರ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಬೇಕು. ಇಲ್ಲದಿದ್ದರೆ ದಲಿತರ ಹಕ್ಕುಗಳ ರಕ್ಷಣೆಗಾಗಿ ನಾವೇ ಕಾನೂನು ಹೋರಾಟ ನಡೆಸುತ್ತೇವೆ ಎಂದು ಎಚ್ಚರಿಸಿದರು.

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಕುರಿತು ಕಾಂಗ್ರೆಸ್ ಅನಗತ್ಯ ಗೊಂದಲ ಸೃಷ್ಟಿಸುತ್ತಿದೆ. ಮತದಾರರ ಪಟ್ಟಿ ಇನ್ನೂ ಅಂತಿಮಗೊಂಡಿಲ್ಲ. ಆಕ್ಷೇಪಣೆ ಸಲ್ಲಿಸಲು ಅವಕಾಶವಿದೆ. ಮತಗಳ್ಳತನದ ಆರೋಪದ ಮೂಲಕ ಕಾಂಗ್ರೆಸ್ ತನ್ನ ವೈಫಲ್ಯಗಳನ್ನು ಮುಚ್ಚಿಕೊಳ್ಳಲು ಯತ್ನಿಸುತ್ತಿದೆ ಎಂದು ಟೀಕಿಸಿದರು.

ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ವೀರನಗೌಡ ಲಕ್ಕಿಹಾಳ್, ಮಾಜಿ ಶಾಸಕ ತಿಪ್ಪರಾಜು ಹವಾಲ್ದಾರ್, ರವೀಂದ್ರ ಜಾಲ್ದಾರ್, ನಾಗರಾಜ ಬಲ್ಕಿ, ಸಿದ್ದನಗೌಡ ಸೇರಿದಂತೆ ಪಕ್ಷದ ಪ್ರಮುಖರು ಉಪಸ್ಥಿತರಿದ್ದರು.

# ಅಪಘಾತಗಳು ಆಗದಂತೆ ಮುನ್ನೆಚ್ಚರಿಕೆ ವಹಿಸಿ: ಜಿಲ್ಲಾಧಿಕಾರಿ ಪೂವಿತಾ ಎಸ್.

ಪಟ್ಟಿ ಮಾಡಿ, ವರದಿ ನೀಡಬೇಕು. ಅಲ್ಲದೆ ರಸ್ತೆ ಸುರಕ್ಷತಾ ಸಪ್ತಾಹದ ಅಂಗವಾಗಿ ದ್ವಿಚಕ್ರ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸುವಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ರಸ್ತೆ ಸವಾರಿಗೆ ಕೇವಲ ದಂಡ ವಿಧಿಸುವುದರಿಂದ ಮಾತ್ರ ಜನರಲ್ಲಿ ಬದಲಾವಣೆ ತರಲು ಸಾಧ್ಯವಿಲ್ಲ. ಸಾರ್ವಜನಿಕರಿಗೆ ನಿರಂತರವಾಗಿ ಹೆಚ್ಚಿನ ರೀತಿಯಲ್ಲಿ ಈ ಕುರಿತು ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ರಸ್ತೆ ನಿಯಮಗಳನ್ನು ಸಾರ್ವಜನಿಕರು ಪಾಲಿಸಲಿಸುವಂತೆ ನೋಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಹೇಳಿದರು.

877 ಹಳ್ಳಿಗಳಲ್ಲಿ ಬಸ್ ಸೌಲಭ್ಯ: ಜಿಲ್ಲೆಯ ಒಟ್ಟು 899 ಹಳ್ಳಿಗಳ ಪೈಕಿ 877 ಹಳ್ಳಿಗಳಿಗೆ ಈಗಾಗಲೇ ಬಸ್ ಸೌಲಭ್ಯ ಕಲ್ಪಿಸಲಾಗಿದ್ದು, ಉಳಿದ ಹಳ್ಳಿಗಳಿಗೂ ಬಸ್ ಸೌಕರ್ಯ ಒದಗಿಸಲು ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು. ಮುಂದಿನ 20 ದಿನಗಳಲ್ಲಿ ಎಲ್ಲಾ ಶಾಲೆಗಳು ತಮ್ಮ ಬಸ್ ಸೇವೆಗಳಿಗೆ ಸಂಬಧಿಸಿದತೆ ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂಬುದರ ಕುರಿತು ವರದಿಯನ್ನು ಸಲ್ಲಿಸಬೇಕು. ಸಾರಿಗೆ ಕುರಿತು ಬಂದಿರುವ ದೂರುಗಳಲ್ಲಿ ಹೆಚ್ಚಿನವು ನಿಜವಾದ ದೂರುಗಳಾಗಿವೆ ಎಂದು ಕಂಡುಬದಿರುವುದರಿದ ಯಾವುದೇ ದೂರುಗಳನ್ನು ಕಡೆಗಣಿಸದೆ ತಕ್ಷಣವೇ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು. ಅಲ್ಲದೆ ಬಸ್ಸುಗಳು ಶಾಲಾ ವೇಳೆಗೆ ಸರಿಯಾಗಿ ಸಂಚರಿಸುವುದನ್ನು ಖಚಿತಪಡಿಸಿಕೊಳ್ಳಬೇಕು ಹಾಗೂ ಯಾವುದೇ ಕಾರಣಕ್ಕೂ ಮಕ್ಕಳ ಸುರಕ್ಷತೆಗೆ ಧಕ್ಕೆಯಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸಂಬಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಜಿ.ಹರೀಶ್, ಪ್ರಾದೇಶಿಕ ರಸ್ತೆ ಸಾರಿಗೆ ಇಲಾಖೆಯ ಅಧಿಕಾರಿ ರಾಕೇಶ್ ಎಮ್., ಲೋಕೋಪಯೋಗಿ ಇಲಾಖೆಯ ಕಾರ್ಯನಿರ್ವಾಹಕ ಅಧಿಕಾರಿ ಹೆಚ್.ಬಸವರಾಜ., ರಾಷ್ಟಿಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ರಾಯಚೂರು ವಿಭಾಗದ ನಿಯಂತ್ರಣಾಧಿಕಾರಿ ಇಮಾಮ್ ಕಾಸೀಮ್ ಕಂದಗಲ್ಲ, ರಾಯಚೂರು ನಗರಾಭಿವೃದ್ಧಿ ಕೋಶದ ಯೋಜನಾಧಿಕಾರಿ ತಿಮ್ಮಪ್ಪ ಬಿರಾದಾರ್, ಎಇಇಗಳಾದ ಮಹೇಶ್, ಜ್ಯೋತಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಇದ್ದರು.

# ತುಂಗಭದ್ರಾ ಕಾರ್ಮಿಕರ ಬಾಕಿ ವೇತನ ಪಾವತಿ, ವಿಜಯಲಕ್ಷ್ಮಿ ಪಾಟೀಲ ಅಮಾನತಿಗೆ ಅ.22ರ ಗಡುವು

ತೀರ್ಪು ಕಾರ್ಮಿಕರ ಹೋರಾಟಕ್ಕೆ ದೊರೆತ ಮಹತ್ವದ ಗೆಲುವಾಗಿದೆ ಎಂದು ಹೇಳಿದರು.

ಯರಮರಸ್‌ನಿಂದ ಸಿರವಾರಕ್ಕೆ ವರ್ಗಾವಣೆಯಾಗಿ ಆರು ವರ್ಷಗಳಾದರೂ ಹಿಂದಿನ ಉಗ್ರಾಣದ ಪ್ರಭಾರವನ್ನು ಹಸ್ತಾಂತರಿಸಿಲ್ಲ ಎಂದು ವಿಜಯಲಕ್ಷ್ಮಿ ಪಾಟೀಲ ವಿರುದ್ಧ ಆರೋಪಿಸಿದ ಅವರು, ಅಕ್ಟೋಬರ್ 22ರೊಳಗೆ ಅವರನ್ನು ಅಮಾನತುಗೊಳಿಸಲು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಸಂಘದ ಪ್ರಧಾನ ಕಾರ್ಯದರ್ಶಿ ಜಿ. ಅಡವಿರಾವ್, ಹನುಮಂತಪ್ಪ ಲಿಂಗಸುಗೂರು, ಹನುಮಂತಪ್ಪ ಸಿರವಾರ, ಹನುಮಂತಪ್ಪ ಸಿಂಧನೂರು ಹಾಗೂ ಅಮರೇಗೌಡ ಉಪಸ್ಥಿತರಿದ್ದರು.

# ಕನ್ನಡಿಗರ ಹಕ್ಕುಗಳ ರಕ್ಷಣೆಗೆ ಸ್ವಾಭಿಮಾನಿ ಕನ್ನಡಿಗ ಸಂಘಟನೆ ಸ್ಥಾಪನೆ: ವೆಂಕಟೇಶ್ ಮಲ್ಲದೇವರ ಗುಡ್ಡ

ಸಂಘಟನೆಯ ಸಂಸ್ಥಾಪಕ ರಾಜ್ಯಾಧ್ಯಕ್ಷ ಲಕ್ಷ್ಮಣ ಭೋವಿ, ರಾಜ್ಯ ಗೌರವಾಧ್ಯಕ್ಷ ಮರಿಯಪ್ಪ ಬಂಡಿ, ಕಾರ್ಯಾಧ್ಯಕ್ಷ ದುರುಗೇಶ್ ಬಾಲಿ, ಉಪಾಧ್ಯಕ್ಷ ಖಾಜಾ ಹುಸೇನ್ ದಿದ್ದಿರಿ, ಖಜಾಂಚಿ ಮಂಜುನಾಥ್ ಪಾಟೀಲ್ ಹಟ್ಟಿ, ಯುವ ಘಟಕದ ಅಧ್ಯಕ್ಷ ಗ್ಯಾನಪ್ಪ ಸಿಂಧನೂರು, ಜಂಟಿ ಕಾರ್ಯದರ್ಶಿ ಅಲ್ಲಾಬಂದ್ ಸಾಬ್, ಸಂಘಟನಾ ಕಾರ್ಯದರ್ಶಿ ಮೀರಾಬಾಯಿ ರೌಡಕುಂದ, ಮಾಧ್ಯಮ ವಕ್ತಾರ ಬಸವರಾಜ ಬುಕ್ಕನಹಟ್ಟಿ, ಕಾನೂನು ಸಲಹೆಗಾರ ಕೆ. ಭೀಮನಗೌಡ, ಮೀರಾಬಾಯಿ ಹಾಗೂ ಶಶಿಕಲಾ ಭೀಮರಾಯ ಉಪಸ್ಥಿತರಿದ್ದರು.

# ಮಾಹಿತಿ ಹಕ್ಕು ಕಾಯ್ದೆಯ ಆಶಯ ಈಡೇರಿಸಲು ಆಯೋಗ ಬದ್ಧ: ಬಿ. ವೆಂಕಟ ಸಿಂಗ್

ಕುರಿತು ಮಾಹಿತಿ ಪಡೆಯುವುದು ಅವರ ಕಾನೂನುಬದ್ಧ ಹಕ್ಕಾಗಿದೆ. ಮಾಹಿತಿ ಒದಗಿಸುವ ಪ್ರಕ್ರಿಯೆಯಲ್ಲಿ ಅನಗತ್ಯ ವಿಳಂಬವಾಗದಂತೆ ಅಧಿಕಾರಿಗಳು ಎಚ್ಚರಿಕೆ ವಹಿಸಬೇಕು. ಕಾಯ್ದೆಯ ಬಗ್ಗೆ ಜನರಲ್ಲಿ ಅರಿವು ಮೂಡಿಸುವುದರ ಜೊತೆಗೆ ಅರ್ಜಿದಾರರಿಗೆ ಸೂಕ್ತ ಸಮಯದಲ್ಲಿ ಮಾಹಿತಿ ದೊರೆಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಸಲಹೆ ನೀಡಿದರು.

ಕಲಬುರಗಿ ಪೀಠದಲ್ಲಿ ಮಾಹಿತಿ ಹಕ್ಕು ಕಾಯ್ದೆಗೆ ಸಂಬಂಧಿಸಿದ ಪ್ರಕರಣಗಳ ವಿಚಾರಣೆ ಹಾಗೂ ವಿಲೇವಾರಿ ತ್ವರಿತಗತಿಯಲ್ಲಿ ನಡೆಯುತ್ತಿದೆ. ಆಯೋಗದ ಅಧಿಕಾರಿಗಳು ಮತ್ತು ಸಿಬ್ಬಂದಿ ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸುತ್ತಿದ್ದು, ಸಾರ್ವಜನಿಕರಿಗೆ ಕಾಯ್ದೆಯ ಪ್ರಯೋಜನಗಳು ಇನ್ನಷ್ಟು ಪರಿಣಾಮಕಾರಿಯಾಗಿ ತಲುಪುವಂತೆ ಶ್ರಮಿಸಬೇಕು ಎಂದು ಸೂಚಿಸಿದರು.

ಕಾರ್ಯಕ್ರಮದ ಆರಂಭದಲ್ಲಿ ಪೀಠದ ಕಾನೂನು ಸಹಾಯಕಿ ಪೂಜಾ ಆರ್. ಪ್ರಾಸ್ತಾವಿಕವಾಗಿ ಮಾತನಾಡಿ, ಮಾಹಿತಿ ಹಕ್ಕು ಕಾಯ್ದೆಯ ಮಹತ್ವ ಹಾಗೂ ಕಾರ್ಯಕ್ರಮದ ಉದ್ದೇಶವನ್ನು ವಿವರಿಸಿದರು. ಶಾಖಾಧಿಕಾರಿ ಶಿವಕುಮಾರ ವಂದಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

## ವೀರ ಮದಕರಿ ನಾಯಕರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಿ: ಭೀಮಣ್ಣ ನಾಯಕ



ಜಾಲಹಳ್ಳಿ, ಅ.13: ನಾಡಿನರಕ್ಷಣೆಗಾಗಿ ಶೌರ್ಯ, ಸಾಹಸ ಹಾಗೂ ಧೈರ್ಯದಿಂದ ಹೋರಾಡಿದ ವೀರ ಮದಕರಿ ನಾಯಕರ ಜೀವನ ಮತ್ತು ಆದರ್ಶಗಳು ಇಂದಿನ ಯುವಜನರಿಗೆ ಸ್ಫೂರ್ತಿಯಾಗಿದ್ದು, ಅವರ ಹೋರಾಟದ ಮನೋಭಾವವನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಭೀಮಣ್ಣ ನಾಯಕ ಹೇಳಿದರು.

ದೇವದುರ್ಗ ತಾಲೂಕಿನ ಹೊಸೂರು ಸಿದ್ಧಾಪೂರ ಗ್ರಾಮದಲ್ಲಿ ಮಂಗಳವಾರ ಆಯೋಜಿಸಿದ್ದ ವೀರ ಮದಕರಿ ನಾಯಕರ ಜಯಂತಿ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಪುಷ್ಪಾರ್ಚನೆ ಮೂಲಕ ಗೌರವ ನಮನ ಸಲ್ಲಿಸಿದ ಬಳಿಕ ಅವರು ಮಾತನಾಡಿದರು.

ಚಿತ್ರದುರ್ಗದ ವೀರ ಮದಕರಿ ನಾಯಕರು ತಮ್ಮ ಧೈರ್ಯ, ಶೌರ್ಯ ಹಾಗೂ ಸ್ವಾಭಿಮಾನದಿಂದ ಇತಿಹಾಸದಲ್ಲಿ ವಿಶಿಷ್ಟ ಸ್ಥಾನ ಪಡೆದಿದ್ದಾರೆ. ನಾಡು ಮತ್ತು ಜನರ ರಕ್ಷಣೆಗಾಗಿ ಅವರು ನಡೆಸಿದ ಹೋರಾಟಗಳು ಇಂದಿಗೂ ಸ್ಮರಣೀಯವಾಗಿವೆ. ಅವರ ನಾಯಕತ್ವದ ಗುಣಗಳು, ಹೋರಾಟದ ಬದುಕು ಹಾಗೂ ತತ್ವಾದರ್ಶಗಳನ್ನು ಯುವಪೀಳಿಗೆಗೆ ಪರಿಚಯಿಸುವ ಕೆಲಸವಾಗಬೇಕು ಎಂದು ತಿಳಿಸಿದರು.

ಸಮಾಜದಲ್ಲಿ ಒಗ್ಗಟ್ಟು, ಸ್ವಾಭಿಮಾನ ಹಾಗೂ ಸಹೋದರತ್ವದ ಭಾವನೆ ಬೆಳೆಸಿಕೊಳ್ಳುವುದು ಅತ್ಯಂತ ಅಗತ್ಯವಾಗಿದೆ. ಮಹನೀಯರ ಜಯಂತಿ ಆಚರಣೆಯ ಜೊತೆಗೆ ಅವರ ಜೀವನದ ಮೌಲ್ಯಗಳನ್ನು ಅರ್ಥಮಾಡಿಕೊಂಡು ಉತ್ತಮ ಸಮಾಜ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

ವಾಲ್ಮೀಕಿ ಯುವ ಬ್ರಿಗೇಡ್ ತಾಲೂಕು ಅಧ್ಯಕ್ಷ ವೆಂಕಟೇಶ್ ಮುಂಡರಗಿ ಮಾತನಾಡಿ, ಇತಿಹಾಸದ ವೀರಪುರುಷರನ್ನು ಕೇವಲ ಜಯಂತಿಯ ದಿನ ಸ್ಮರಿಸಿದರೆ ಸಾಲದು. ಅವರು ತೋರಿಸಿಕೊಟ್ಟ ಆದರ್ಶಗಳನ್ನು ದೈನಂದಿನ ಜೀವನದಲ್ಲಿ ಅನುಸರಿಸುವುದೇ ಅವರಿಗೆ ಸಲ್ಲಿಸುವ ನಿಜವಾದ ಗೌರವವಾಗಿದೆ. ಯುವಜನರು ಇಂತಹ ಮಹನೀಯರ ಜೀವನ ಚರಿತ್ರೆಯನ್ನು ತಿಳಿದುಕೊಂಡು ಸಮಾಜದ ಅಭಿವೃದ್ಧಿಗೆ ಶ್ರಮಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಅಯ್ಯಪ್ಪ ಜಲ್ಲಿ, ರವಿ ಮುರಾಳ, ದುರುಗಯ್ಯ ಜಲ್ಲಿ, ವೆಂಕಟೇಶ್ ಕಸನದೊಡ್ಡಿ, ಸೋಮನಾಥ ಜಲ್ಲಿ, ಗೋವಿಂದರಾಜ್ ಮುರಾಳ, ಚನ್ನಬಸವ ಕಾವಲಿ, ಶರಣಬಸವ ಮುರಾಳ, ತಿರುಪತಿ ಲಿಂಗದಹಳ್ಳಿ, ಸಿದ್ದಣ್ಣ ಪ್ಯಾರಕಲ್, ಅಮರೇಶ್, ವೆಂಕಟೇಶ್ ಜಲ್ಲಿ, ಕಿರಣ್ ಸೇರಿದಂತೆ ಗ್ರಾಮದ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಸತ್ಯಾಸತ್ಯತೆ ಅರಿಯದೆ ಸಮುದಾಯದ ಹೆಸರಿನಲ್ಲಿ ಆರೋಪ ಮಾಡಬೇಡಿ: ರಾಮಣ್ಣ ಮದರಕಲ್



ದೇವದುರ್ಗ: ಮದರಕಲ್ ಗ್ರಾಮದ ಸರ್ಕಾರಿ ಶಾಲೆ ಕಟ್ಟಡ, ಮಹಿಳೆಯರ ಶೌಚಾಲಯ ಹಾಗೂ ತಿಪ್ಪೆ ಜಾಗದ ವಿಚಾರವಾಗಿ ಸಾಮಾಜಿಕ ಜಾಲತಾಣಗಳಲ್ಲಿ ಆಧಾರರಹಿತ ಆರೋಪಗಳನ್ನು ಮಾಡಲಾಗುತ್ತಿದೆ. ಗ್ರಾಮದ ವಾಸ್ತವ ಪರಿಸ್ಥಿತಿಯನ್ನು ತಿಳಿದುಕೊಳ್ಳದೆ ಸಮುದಾಯದ ಹೆಸರಿನಲ್ಲಿ ಗೊಂದಲ ಸೃಷ್ಟಿಸುವುದು ಸರಿಯಲ್ಲ ಎಂದು ಗ್ರಾಮದ ಮುಖಂಡ ರಾಮಣ್ಣ ಮದರಕಲ್ ಅಸಮಾಧಾನ ವ್ಯಕ್ತಪಡಿಸಿದರು.

ತಾಲೂಕಿನ ಮದರಕಲ್ ಗ್ರಾಮದ ಈಶ್ವರ ದೇವಸ್ಥಾನದಲ್ಲಿ ಮಾದಿಗ ಮೀಸಲಾತಿ ಹೋರಾಟ ಸಮಿತಿಯ ರಾಜ್ಯಾಧ್ಯಕ್ಷ ಶಿವರಾಯ ಅಕ್ಕರಕಿ ಅವರ ನೇತೃತ್ವದಲ್ಲಿ ನಡೆದ ಸಮುದಾಯದ ಮುಖಂಡರ ಸಭೆಯಲ್ಲಿ ಅವರು ಮಾತನಾಡಿದರು.

ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ನೂತನ ಕಟ್ಟಡ ನಿರ್ಮಾಣ, ಮಹಿಳೆಯರ ಶೌಚಾಲಯ ತೆರವು ಹಾಗೂ ಶಾಲೆಗೆ ಸಂಪರ್ಕ ಕಲ್ಪಿಸುವ ರಸ್ತೆಯ ವಿಚಾರವಾಗಿ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ವಿಡಿಯೋಗಳ ಹಿನ್ನೆಲೆಯಲ್ಲಿ ಸಭೆ ಆಯೋಜಿಸಲಾಗಿತ್ತು.

ಸರ್ಕಾರಿ ಶಾಲೆಯ ನೂತನ ಕಟ್ಟಡ ನಿರ್ಮಾಣಕ್ಕೆ ಅನುದಾನ ಬಿಡುಗಡೆಯಾದ ಸಂದರ್ಭದಲ್ಲಿ ಶರಣಗೌಡ ಮದರಕಲ್ ಅವರು ಈ ವಿಷಯವನ್ನು ಗ್ರಾಮದ ಮುಖಂಡರ ಗಮನಕ್ಕೆ ತಂದಿದ್ದರು. ಬಳಿಕ ಸಮುದಾಯದ ಮುಖಂಡರು ಅವರನ್ನು ಕಾಲೋನಿಗೆ ಆಹ್ವಾನಿಸಿ, ಶಾಲೆ ನಿರ್ಮಾಣದ ಸ್ಥಳ ಹಾಗೂ ಮೂಲಸೌಕರ್ಯಗಳ ಕುರಿತು ಚರ್ಚೆ ನಡೆಸಿದ್ದರು. ಶಾಲೆಯ ಪಕ್ಕದಲ್ಲಿ ಶೌಚಾಲಯ ನಿರ್ಮಿಸದಿರಲು ತೀರ್ಮಾನಿಸಲಾಗಿದ್ದು, ಪರ್ಯಾಯವಾಗಿ ಸೂಕ್ತ ಜಾಗ ತೋರಿಸಿದರೆ ಸ್ವಂತ ಖರ್ಚಿನಲ್ಲಿ ಶೌಚಾಲಯ ನಿರ್ಮಿಸಿಕೊಡುವುದಾಗಿ ಶರಣಗೌಡ ತಿಳಿಸಿದ್ದರು ಎಂದು ರಾಮಣ್ಣ ವಿವರಿಸಿದರು.

ಮಹಿಳೆಯರ ಶೌಚಾಲಯವನ್ನು ಸುಮಾರು ಮೂರು ವರ್ಷಗಳ ಹಿಂದೆಯೇ ತೆರವುಗೊಳಿಸಲಾಗಿತ್ತು. ಆದರೆ ಇತ್ತೀಚೆಗೆ ಅದನ್ನು ಕೆಡವಲಾಗಿದೆ ಎಂಬ ರೀತಿಯಲ್ಲಿ ಯಲ್ಲಪ್ಪ ಆಲ್ದರ್ತಿ ಅವರು ಸಾಮಾಜಿಕ ಜಾಲತಾಣಗಳಲ್ಲಿ ಆರೋಪ ಮಾಡುತ್ತಿರುವುದು ಸರಿಯಲ್ಲ. ವಾಸ್ತವಾಂಶಗಳನ್ನು ಪರಿಶೀಲಿಸದೆ ಇಂತಹ ಹೇಳಿಕೆಗಳನ್ನು ನೀಡುವುದರಿಂದ ಗ್ರಾಮದಲ್ಲಿ ಅನಗತ್ಯ ಗೊಂದಲ ಉಂಟಾಗುತ್ತದೆ ಎಂದು ಆರೋಪಿಸಿದರು.

ಶಾಲೆಯ ನೂತನ ಕಟ್ಟಡ ನಿರ್ಮಾಣ ಪೂರ್ಣಗೊಂಡಿದ್ದು, ಉದ್ಘಾಟನೆಯ ಹಂತದಲ್ಲಿದೆ. ಆದರೆ ಶಾಲೆಗೆ ಸಂಪರ್ಕ ಕಲ್ಪಿಸುವ ದಾರಿಯಲ್ಲಿ ಕೆಲವು ಗ್ರಾಮಸ್ಥರ ತಿಪ್ಪೆ ಜಾಗಗಳಿರುವುದರಿಂದ ಸಮಸ್ಯೆ ಎದುರಾಗಿದೆ. ಇದಕ್ಕೆ ಸಂಬಂಧಪಟ್ಟವರೊಂದಿಗೆ ಚರ್ಚಿಸಿ ಪರಿಹಾರ ಕಂಡುಕೊಳ್ಳುವ ಬದಲು ಶರಣಗೌಡ ಮದರಕಲ್ ಅವರನ್ನು ಗುರಿಯಾಗಿಸಿಕೊಂಡು ಆರೋಪ ಮಾಡಲಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಗ್ರಾಮದ ಮುಖಂಡ ಈಶಪ್ಪ ಮದರಕಲ್ ಮಾತನಾಡಿ, ಈ ಹಿಂದೆ ಗ್ರಾಮದ ಹೋಟೆಲ್‌ವೊಂದರಲ್ಲಿ ಅಸ್ಪೃಶ್ಯತೆ ಆಚರಣೆಯ ಆರೋಪ ಕೇಳಿಬಂದಾಗ ಸಮಸ್ಯೆ ಬಗೆಹರಿಸಲು ಯಲ್ಲಪ್ಪ ಆಲ್ದರ್ತಿ ಅವರನ್ನು ಆಹ್ವಾನಿಸಲಾಗಿತ್ತು. ನಂತರ ಗಬ್ಬೂರು ಪೊಲೀಸ್ ಠಾಣೆಯಲ್ಲಿ ಹೋಟೆಲ್ ಮಾಲೀಕರೊಂದಿಗೆ ಚರ್ಚೆ ನಡೆಸಿ, ಮುಂದೆ ಯಾವುದೇ ರೀತಿಯ ಭೇದಭಾವ ಮಾಡುವುದಿಲ್ಲ ಎಂಬ ಭರವಸೆಯೊಂದಿಗೆ ಸಮಸ್ಯೆ ಬಗೆಹರಿಸಲಾಗಿತ್ತು ಎಂದು ತಿಳಿಸಿದರು.

ಶಾಲೆ ಹಾಗೂ ಶೌಚಾಲಯದ ವಿಚಾರವಾಗಿ ತಹಶೀಲ್ದಾರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮ ಲೆಕ್ಕಾಧಿಕಾರಿಗಳು ಗ್ರಾಮಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಯಲ್ಲಪ್ಪ ಆಲ್ದರ್ತಿ ಅವರು ಶರಣಗೌಡ ಮದರಕಲ್ ವಿರುದ್ಧ ವೈಯಕ್ತಿಕ ಆರೋಪಗಳನ್ನು ಒಳಗೊಂಡ ವಿಡಿಯೋಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಟ್ಟಿದ್ದಾರೆ. ಈ ಕುರಿತು ಅವರಿಗೆ ನೇರವಾಗಿ ಹಾಗೂ ದೂರವಾಣಿ ಮೂಲಕವೂ ಆಕ್ಷೇಪ ವ್ಯಕ್ತಪಡಿಸಲಾಗಿದೆ ಎಂದು ಹೇಳಿದರು.

ಪರಶುರಾಮ ಮದರಕಲ್ ಮಾತನಾಡಿ, ಗ್ರಾಮದ ಎಲ್ಲ ಸಮುದಾಯಗಳ ಜನರು ಪರಸ್ಪರ ಪ್ರೀತಿ, ವಿಶ್ವಾಸದಿಂದ ಜೀವನ ನಡೆಸುತ್ತಿದ್ದಾರೆ. ವೈಯಕ್ತಿಕ ಭಿನ್ನಾಭಿಪ್ರಾಯಗಳಿಗೆ ಸಮುದಾಯದ ಹೆಸರನ್ನು ಬಳಸಿಕೊಳ್ಳಬಾರದು. ಗ್ರಾಮದಲ್ಲಿರುವ ಸಮಸ್ಯೆಗಳನ್ನು ಸ್ಥಳೀಯ ಮುಖಂಡರೊಂದಿಗೆ ಚರ್ಚಿಸಿ ಪರಿಹರಿಸಿಕೊಳ್ಳಬೇಕು. ಶರಣಗೌಡ ಮದರಕಲ್ ಅವರ ವಿರುದ್ಧ ಅಪಪ್ರಚಾರ ಮಾಡುವುದನ್ನು ನಿಲ್ಲಿಸಬೇಕು ಎಂದು ಒತ್ತಾಯಿಸಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಮಾದಿಗ ಮೀಸಲಾತಿ ಹೋರಾಟ ಸಮಿತಿಯ ರಾಜ್ಯಾಧ್ಯಕ್ಷ ಶಿವರಾಯ ಅಕ್ಕರಕಿ ಮಾತನಾಡಿ, ಸಮುದಾಯದ ಮುಖಂಡರು ವೈಯಕ್ತಿಕ ಹಿತಾಸಕ್ತಿಗಿಂತ ಸಮಾಜದ ಏಳಿಗೆಗೆ ಆದ್ಯತೆ ನೀಡಬೇಕು. ಮದರಕಲ್ ಗ್ರಾಮದ ಸಮಸ್ಯೆಗಳ ಕುರಿತು ಏಕಪಕ್ಷೀಯ ಹೇಳಿಕೆ ನೀಡದೆ, ಸ್ಥಳೀಯ ಮುಖಂಡರೊಂದಿಗೆ ಸಮಾಲೋಚಿಸಿ ವಾಸ್ತವಾಂಶಗಳನ್ನು ತಿಳಿದುಕೊಳ್ಳಬೇಕು ಎಂದು ಸಲಹೆ ನೀಡಿದರು.

ಚುನಾವಣೆಯ ಸಂದರ್ಭದಲ್ಲಿ ಯಾರ ವಿರುದ್ಧವೂ ಆಧಾರರಹಿತ ಆರೋಪಗಳನ್ನು ಮಾಡುವುದು ಸರಿಯಲ್ಲ. ಗ್ರಾಮದಲ್ಲಿ ಸಮಸ್ಯೆಗಳಿದ್ದರೆ ಅವುಗಳಿಗೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಎಲ್ಲರೂ ಜವಾಬ್ದಾರಿಯಿಂದ ನಡೆದುಕೊಳ್ಳಬೇಕು ಎಂದು ಹೇಳಿದರು.

ದಲಿತ ಮುಖಂಡ ಬೂದೆಪ್ಪ ಕ್ಯಾದಿಗಿ ಮಾತನಾಡಿ, ಯಲ್ಲಪ್ಪ ಆಲ್ದರ್ತಿ ಅವರು ಗ್ರಾಮದ ವಿಚಾರದಲ್ಲಿ ಸತ್ಯಾಸತ್ಯತೆ ತಿಳಿದುಕೊಂಡು ಮಾತನಾಡಬೇಕು. ಶರಣಗೌಡ ಮದರಕಲ್ ಅವರೊಂದಿಗೆ ವೈಯಕ್ತಿಕ ಭಿನ್ನಾಭಿಪ್ರಾಯಗಳಿದ್ದರೆ ಅದಕ್ಕೆ ಸಮುದಾಯವನ್ನು ಎಳೆತರುವುದು ಸರಿಯಲ್ಲ ಎಂದು ಆಕ್ಷೇಪಿಸಿದರು.

ಈ ಸಂದರ್ಭದಲ್ಲಿ ಮಾದಿಗ ಸಮಾಜದ ಹೋರಾಟಗಾರರಾದ ಶಾಂತಕುಮಾರ ಹೊನ್ನಟಗಿ, ನಾಗರಾಜ ಜಂಬಲದಿನ್ನಿ, ಮರೆಪ್ಪ ಮದರಕಲ್, ಮುತ್ತುರಾಜ ಮ್ಯಾತ್ರಿ ಗಬ್ಬೂರು, ತುಕರಾಮ ಗಣೇಕಲ್, ಹುಲಿಗೆಪ್ಪ, ಬಸವಲಿಂಗ, ಗ್ರಾಮದ ಯುವ ಮುಖಂಡರಾದ ಎನ್. ರೆಡ್ಡಿ, ಸಾಬಣ್ಣ, ಚಿದಾನಂದ, ಬೂದೆಪ್ಪ, ದುರಗಪ್ಪ, ಶಿವಣ್ಣ, ಗುಂಡರಾಮ, ಯಲ್ಲಪ್ಪ, ಪ್ರಭು, ಹನುಮಂತ, ಬಂದಪ್ಪ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಸಮಾಜ ಸೇವೆಯಿಂದ ಸಂಪಾದನೆಗೆ ಸಾರ್ಥಕತೆ: ವಿಷ್ಣುಕಾಂತ್ ಭೂತಾಡ್



ರಾಯಚೂರು, ಅ.13: ಶಿಕ್ಷಣ ಸಂಸ್ಥೆಗಳ ಅಭಿವೃದ್ಧಿಗೆ ಸಮಾಜದ ಸಹಕಾರ ಅತ್ಯಂತ ಅಗತ್ಯವಾಗಿದ್ದು, ತಾವು ಗಳಿಸಿದ ಸಂಪಾದನೆಯ ಒಂದು ಭಾಗವನ್ನು ಸಮಾಜದ ಒಳಿತಿಗಾಗಿ ಬಳಸಿದಾಗ ಬದುಕಿಗೆ ನಿಜವಾದ ಸಾರ್ಥಕತೆ ದೊರೆಯುತ್ತದೆ ಎಂದು ಶಿಲ್ಪಾ ಮೆಡಿಕೇರ್ ಲಿಮಿಟೆಡ್‌ನ ವ್ಯವಸ್ಥಾಪಕ ನಿರ್ದೇಶಕ ವಿಷ್ಣುಕಾಂತ್ ಭೂತಾಡ್ ಹೇಳಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಗ್ರಂಥಾಲಯದ ಅಭಿವೃದ್ಧಿಗಾಗಿ ಶಿಲ್ಪಾ ಫೌಂಡೇಶನ್ ವತಿಯಿಂದ ₹3.93 ಲಕ್ಷ ಮೌಲ್ಯದ ಪುಸ್ತಕಗಳು ಹಾಗೂ ಪೀಠೋಪಕರಣಗಳನ್ನು ದೇಣಿಗೆಯಾಗಿ ನೀಡಿದ ಹಿನ್ನೆಲೆಯಲ್ಲಿ ಮಂಗಳವಾರ ಕಾಲೇಜಿನಲ್ಲಿ ಆಯೋಜಿಸಿದ್ದ ಸನ್ಮಾನ ಸಮಾರಂಭದಲ್ಲಿ ಅವರು ಮಾತನಾಡಿದರು.

ಪುಸ್ತಕಗಳು ಜ್ಞಾನದ ಮೂಲವಾಗಿದ್ದು, ವಿದ್ಯಾರ್ಥಿಗಳಲ್ಲಿ ಓದುವ ಹವ್ಯಾಸ, ಚಿಂತನಾ ಸಾಮರ್ಥ್ಯ ಹಾಗೂ ವ್ಯಕ್ತಿತ್ವ ವಿಕಸನವನ್ನು ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ. ಪಠ್ಯಪುಸ್ತಕಗಳ ಅಧ್ಯಯನದ ಜೊತೆಗೆ ವಿವಿಧ ವಿಷಯಗಳಿಗೆ ಸಂಬಂಧಿಸಿದ ಪುಸ್ತಕಗಳನ್ನು ಓದುವ ಮೂಲಕ ವಿದ್ಯಾರ್ಥಿಗಳು ತಮ್ಮ ಜ್ಞಾನವನ್ನು ವಿಸ್ತರಿಸಿಕೊಳ್ಳಬೇಕು. ಗ್ರಂಥಾಲಯದಲ್ಲಿರುವ ಸೌಲಭ್ಯಗಳನ್ನು ಸಮರ್ಪಕವಾಗಿ ಬಳಸಿಕೊಂಡು ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಸಮಾಜದ ಪ್ರಗತಿಗೆ ಶಿಕ್ಷಣ ಪ್ರಮುಖ ಆಧಾರವಾಗಿದ್ದು, ಶಿಕ್ಷಣ ಸಂಸ್ಥೆಗಳ ಮೂಲಸೌಕರ್ಯ ಅಭಿವೃದ್ಧಿಗೆ ದಾನಿಗಳು ಹಾಗೂ ಸಂಘಸಂಸ್ಥೆಗಳು ಕೈಜೋಡಿಸುವುದು ಅಗತ್ಯವಾಗಿದೆ. ಇಂತಹ ಸೇವಾ ಕಾರ್ಯಗಳು ಇತರರಿಗೂ ಪ್ರೇರಣೆಯಾಗಬೇಕು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲೆ ಡಾ. ಸುಗುಣ ಬಸವರಾಜ ಮಾತನಾಡಿ, ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಯಲ್ಲಿ ಗ್ರಂಥಾಲಯಗಳ ಪಾತ್ರ ಮಹತ್ವದ್ದಾಗಿದೆ. ಉತ್ತಮ ಪುಸ್ತಕಗಳು, ಓದಲು ಅನುಕೂಲಕರವಾದ ವಾತಾವರಣ ಹಾಗೂ ಅಗತ್ಯ ಪೀಠೋಪಕರಣಗಳು ಲಭ್ಯವಿದ್ದಾಗ ವಿದ್ಯಾರ್ಥಿಗಳಲ್ಲಿ ಅಧ್ಯಯನದ ಆಸಕ್ತಿ ಹೆಚ್ಚಾಗುತ್ತದೆ ಎಂದು ಹೇಳಿದರು.

ಶಿಲ್ಪಾ ಫೌಂಡೇಶನ್ ವತಿಯಿಂದ ನೀಡಿರುವ ₹3.93 ಲಕ್ಷ ಮೌಲ್ಯದ ಪುಸ್ತಕಗಳು ಹಾಗೂ ಪೀಠೋಪಕರಣಗಳ ಕೊಡುಗೆಯು ಕಾಲೇಜಿನ ಗ್ರಂಥಾಲಯದ ಅಭಿವೃದ್ಧಿಗೆ ಸಹಕಾರಿಯಾಗಲಿದೆ. ವಿಶೇಷವಾಗಿ ವಿದ್ಯಾರ್ಥಿನಿಯರ ಕಲಿಕಾ ಗುಣಮಟ್ಟವನ್ನು ಹೆಚ್ಚಿಸಲು ಈ ನೆರವು ಉಪಯುಕ್ತವಾಗಲಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾಲೇಜಿನ ಶೈಕ್ಷಣಿಕ ಅಭಿವೃದ್ಧಿಗೆ ಉದಾರ ಕೊಡುಗೆ ನೀಡಿದ ವಿಷ್ಣುಕಾಂತ್ ಭೂತಾಡ್ ಅವರನ್ನು ಇದೇ ಸಂದರ್ಭದಲ್ಲಿ ಕಾಲೇಜಿನ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಐಕ್ಯೂಎಸಿ ಸಂಚಾಲಕಿ ಡಾ. ಜ್ಯೋತಿ ಸಿ.ಕೆ. ಪ್ರಾಸ್ತಾವಿಕವಾಗಿ ಮಾತನಾಡಿ ಕಾರ್ಯಕ್ರಮದ ಉದ್ದೇಶ ವಿವರಿಸಿದರು. ಕಾರ್ಯಕ್ರಮದ ಸಂಯೋಜಕ ಹಾಗೂ ಗ್ರಂಥಪಾಲಕ ಡಾ. ಸುರೇಶ್ ಎಸ್. ಅವರು ಸನ್ಮಾನಿತರ ಪರಿಚಯ ಮಾಡಿಕೊಟ್ಟರು. ಐಕ್ಯೂಎಸಿ ಸಹ ಸಂಚಾಲಕ ಶರಣಗೌಡ ಕೆ. ಹಾಗೂ ಸಿಬ್ಬಂದಿ ಕಾರ್ಯದರ್ಶಿ ಡಾ. ಸೈಯಿದಾ ರಷೀದಾ ಪರವಿನ್ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಸಹ ಪ್ರಾಧ್ಯಾಪಕರಾದ ಡಾ. ಸ್ವರೂಪರಾಣಿ, ಡಾ. ಉಮಾದೇವಿ, ಸುಮಿತ್ರಾ ಪ್ಯಾಟಿ, ಸಹಾಯಕ ಪ್ರಾಧ್ಯಾಪಕ ಡಾ. ಚನ್ನಬಸವ ಹಾಗೂ ಅತಿಥಿ ಉಪನ್ಯಾಸಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ರಾಜ್ಯಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ಸಂತೋಷ ಕುಮಾರ್ ಕಾರ್ಯಕ್ರಮ ನಿರೂಪಿಸಿದರು. ದೈಹಿಕ ಶಿಕ್ಷಣ ನಿರ್ದೇಶಕ ಡಾ. ಪ್ರಸನ್ನ ಕುಮಾರ್ ಅತಿಥಿಗಳನ್ನು ಸ್ವಾಗತಿಸಿದರು. ಬಿಎಸ್‌ಸಿ ಐದನೇ ಸೆಮಿಸ್ಟರ್ ವಿದ್ಯಾರ್ಥಿನಿ ಸೌಜನ್ಯ ಪ್ರಾರ್ಥನಾಗೀತೆ ಹಾಡಿದರು. ಆಂಗ್ಲ ವಿಭಾಗದ ಸಹ ಪ್ರಾಧ್ಯಾಪಕ ರಂಗನಾಥ ಬಿಲ್ಲಾರ್ ವಂದಿಸಿದರು. ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

## ಯುವಕರು ತಂದೆ-ತಾಯಿ ಹಾಗೂ ಹಿರಿಯರನ್ನು ಗೌರವಿಸಬೇಕು: ಶ್ರೀ ವಿಶ್ವಪ್ರಿಯ ತೀರ್ಥರು



ಲಿಂಗಸುಗೂರು: ಯುವಜನರು ತಂದೆ-ತಾಯಿ ಹಾಗೂ ಹಿರಿಯರನ್ನು ಗೌರವಿಸುವುದರ ಜೊತೆಗೆ ಉತ್ತಮ ಸಂಸ್ಕಾರ, ಸಮಯಪ್ರಜ್ಞೆ ಮತ್ತು ಧಾರ್ಮಿಕ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಮಕ್ಕಳಲ್ಲಿ ಉತ್ತಮ ಗುಣಗಳನ್ನು ಬೆಳೆಸುವ ಜವಾಬ್ದಾರಿ ಪ್ರತಿಯೊಬ್ಬ ಪೋಷಕರ ಮೇಲಿದೆ ಎಂದು ಉಡುಪಿಯ ಅದಮಾರು ಮಠದ ಶ್ರೀ ವಿಶ್ವಪ್ರಿಯ ತೀರ್ಥ ಶ್ರೀಪಾದರು ಹೇಳಿದರು.

ಪಟ್ಟಣದ ಎಸ್‌ಬಿಐಚ್ ಕಾಲೋನಿಯ ಶ್ರೀ ಲಕ್ಷ್ಮೀ ವೆಂಕಟೇಶ್ವರ ದೇವಸ್ಥಾನದ ರಜತ ಮಹೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಆಶೀರ್ವಚನ ನೀಡಿದ ಅವರು, ಮಾನವನ ಜೀವನದಲ್ಲಿ ತಂದೆ-ತಾಯಿಯ ಸ್ಥಾನ ಅತ್ಯಂತ ಮಹತ್ವದ್ದಾಗಿದೆ. ಅದರಲ್ಲಿಯೂ ಮಕ್ಕಳ ವ್ಯಕ್ತಿತ್ವ ರೂಪಿಸುವಲ್ಲಿ ತಾಯಿಯ ಪಾತ್ರ ದೊಡ್ಡದಾಗಿದೆ. ಕುಟುಂಬದಲ್ಲಿ ಉತ್ತಮ ಸಂಸ್ಕಾರ, ಪ್ರೀತಿ, ವಿಶ್ವಾಸ ಹಾಗೂ ಪರಸ್ಪರ ಗೌರವ ಬೆಳೆದಾಗ ಮಾತ್ರ ಸಮಾಜದಲ್ಲಿ ಸೌಹಾರ್ದತೆ ನೆಲೆಸಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಇಂದಿನ ಕಾಲಘಟ್ಟದಲ್ಲಿ ವೈವಾಹಿಕ ಸಂಬಂಧಗಳ ಮಹತ್ವವನ್ನು ಪ್ರತಿಯೊಬ್ಬರೂ ಅರಿತುಕೊಳ್ಳಬೇಕು. ಪತಿ-ಪತ್ನಿಯರು ಲಕ್ಷ್ಮೀ ನಾರಾಯಣರಂತೆ ಪರಸ್ಪರ ಪ್ರೀತಿ, ವಿಶ್ವಾಸ ಹಾಗೂ ಹೊಂದಾಣಿಕೆಯಿಂದ ಜೀವನ ಸಾಗಿಸಬೇಕು. ಕುಟುಂಬದಲ್ಲಿ ಒಗ್ಗಟ್ಟು ಮತ್ತು ಸಂಸ್ಕಾರ ಉಳಿಸಿಕೊಂಡು ಹೋಗುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಯುವಕರು ತಮ್ಮ ಅಮೂಲ್ಯ ಸಮಯವನ್ನು ವ್ಯರ್ಥ ಮಾಡದೆ ಶಿಕ್ಷಣ, ಉತ್ತಮ ಚಟುವಟಿಕೆಗಳು ಹಾಗೂ ವ್ಯಕ್ತಿತ್ವ ವಿಕಸನಕ್ಕೆ ಬಳಸಿಕೊಳ್ಳಬೇಕು. ದುಶ್ಚಟಗಳಿಂದ ದೂರವಿದ್ದು, ಆಧ್ಯಾತ್ಮಿಕ ಮತ್ತು ಧಾರ್ಮಿಕ ಕಾರ್ಯಗಳಲ್ಲಿ ಆಸಕ್ತಿ ಬೆಳೆಸಿಕೊಳ್ಳಬೇಕು. ಧಾರ್ಮಿಕ ಆಚರಣೆಗಳ ಹಿಂದಿರುವ ಜೀವನ ಮೌಲ್ಯಗಳನ್ನು ಅರ್ಥಮಾಡಿಕೊಂಡು ಸನ್ಮಾರ್ಗದಲ್ಲಿ ನಡೆಯಬೇಕು ಎಂದು ಸಲಹೆ ನೀಡಿದರು.

ನವರಾತ್ರಿ ಉತ್ಸವವು ಮಾತೃಶಕ್ತಿಯ ಆರಾಧನೆಗೆ ವಿಶೇಷ ಮಹತ್ವ ನೀಡುವ ಹಬ್ಬವಾಗಿದೆ. ಒಂಬತ್ತು ದಿನಗಳ ಕಾಲ ಲಕ್ಷ್ಮೀ, ದುರ್ಗೆ ಸೇರಿದಂತೆ ವಿವಿಧ ದೇವತೆಗಳನ್ನು ಭಕ್ತಿಭಾವದಿಂದ ಪೂಜಿಸುವ ಸಂಪ್ರದಾಯವಿದೆ. ಇಂತಹ ಹಬ್ಬಗಳು ಜನರಲ್ಲಿ ಭಕ್ತಿ, ಶ್ರದ್ಧೆ ಹಾಗೂ ಸಾಂಸ್ಕೃತಿಕ ಮೌಲ್ಯಗಳನ್ನು ಬೆಳೆಸಲು ಸಹಕಾರಿಯಾಗುತ್ತವೆ ಎಂದು ವಿವರಿಸಿದರು.

ಶ್ರೀ ವಿಶ್ವಪ್ರಿಯ ತೀರ್ಥರು ಪಟ್ಟಣಕ್ಕೆ ಆಗಮಿಸಿದ ಸಂದರ್ಭದಲ್ಲಿ ಭಕ್ತರು ಬೈಕ್ ರ್ಯಾಲಿ ಹಾಗೂ ಭವ್ಯ ಮೆರವಣಿಗೆ ಮೂಲಕ ಸ್ವಾಗತ ಕೋರಿದರು. ಭಜನೆ, ಕೋಲಾಟ ಹಾಗೂ ವಾದ್ಯಮೇಳಗಳೊಂದಿಗೆ ನಡೆದ ಮೆರವಣಿಗೆಯಲ್ಲಿ ಭಕ್ತರು ಪಾಲ್ಗೊಂಡರು. ಸೋಮವಾರ ಬೆಳಿಗ್ಗೆ ಪಟ್ಟಣದ ಹಲವು ಭಕ್ತರ ಮನೆಗಳಲ್ಲಿ ಶ್ರೀಗಳ ಪಾದಪೂಜೆ ನೆರವೇರಿಸಲಾಯಿತು.

ಈ ಸಂದರ್ಭದಲ್ಲಿ ದೇವಸ್ಥಾನದ ಧರ್ಮದರ್ಶಿ ಪ್ರಾಣೇಶ ಆಚಾರ ವಂದಲಿ, ಅಧ್ಯಕ್ಷ ಮೋಹನ ಜೋಶಿ, ಹಿರಿಯರಾದ ಜಗನ್ನಾಥ ಕುಲಕರ್ಣಿ, ರಾಜಗೋಪಾಲ ಕುಲಕರ್ಣಿ, ಮಧುಸೂದನ ಪುರಾಣಿಕ, ಪ್ರಮೋದ ಕುಲಕರ್ಣಿ, ಬಿ.ಟಿ. ನಾಯಕ, ರಾಮರಾವ್, ಬ್ರಾಹ್ಮಣ ಸಮಾಜದ ಅಧ್ಯಕ್ಷ ಅಶೋಕ ದಿಗ್ಗಾವಿ, ಕಿಶೋರ ಮುತಾಲಿಕ, ನಾರಾಯಣ ಬಿಜ್ಜೂರು, ಮುರಳೀಧರ ಕುಲಕರ್ಣಿ ಸೇರಿದಂತೆ ಮಹಿಳಾ ಭಜನಾ ಮಂಡಳಿಯ ಸದಸ್ಯರು ಹಾಗೂ ಭಕ್ತರು ಉಪಸ್ಥಿತರಿದ್ದರು.

## ರಾಘವೇಂದ್ರ ಸ್ವಾಮಿ ಮಠಕ್ಕೆ ಶ್ರೀ ವಿಶ್ವಪ್ರಿಯ ತೀರ್ಥರ ಭೇಟಿ, ಭಕ್ತರಿಗೆ ಆಶೀರ್ವಚನ



ಲಿಂಗಸುಗೂರು: ಪಟ್ಟಣದ ಶ್ರೀ ರಾಘವೇಂದ್ರ ಸ್ವಾಮಿ ಮಠಕ್ಕೆ ಉಡುಪಿಯ ಅದಮಾರು ಮಠದ ಶ್ರೀ ವಿಶ್ವಪ್ರಿಯ ತೀರ್ಥ ಶ್ರೀಪಾದರು ಭೇಟಿ ನೀಡಿ, ರಾಯರ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು.

ಮಠಕ್ಕೆ ಆಗಮಿಸಿದ ಶ್ರೀಗಳು ಶ್ರೀ ರಾಘವೇಂದ್ರ ಸ್ವಾಮಿಗಳ ಸನ್ನಿಧಿಯಲ್ಲಿ ಭಕ್ತಿಭಾವದಿಂದ ದರ್ಶನ ಪಡೆದರು. ಬಳಿಕ ನೆರೆದಿದ್ದ ಭಕ್ತರಿಗೆ ಫಲಮಂತ್ರಾಕ್ಷತೆ ನೀಡಿ ಆಶೀರ್ವದಿಸಿದರು.

ಈ ಸಂದರ್ಭದಲ್ಲಿ ಭಕ್ತರನ್ನು ಉದ್ದೇಶಿಸಿ ಆಶೀರ್ವಚನ ನೀಡಿದ ಶ್ರೀಗಳು, ಪ್ರತಿಯೊಬ್ಬರೂ ಧಾರ್ಮಿಕ ಮತ್ತು ಆಧ್ಯಾತ್ಮಿಕ ಚಿಂತನೆಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಸನ್ಮಾರ್ಗದಲ್ಲಿ ನಡೆಯಬೇಕು. ದೇವರ ಮೇಲಿನ ಭಕ್ತಿ, ಗುರುಗಳ ಮೇಲಿನ ಶ್ರದ್ಧೆ ಹಾಗೂ ಸತ್ಕಾರ್ಯಗಳಲ್ಲಿ ತೊಡಗಿಸಿಕೊಳ್ಳುವ ಮನೋಭಾವದಿಂದ ಜೀವನದಲ್ಲಿ ಶಾಂತಿ ಮತ್ತು ನೆಮ್ಮದಿ ಪಡೆಯಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಶ್ರೀಗಳ ಆಗಮನದ ಹಿನ್ನೆಲೆಯಲ್ಲಿ ಮಠದಲ್ಲಿ ಭಕ್ತಿಭಾವದ ವಾತಾವರಣ ನಿರ್ಮಾಣವಾಗಿತ್ತು. ಭಕ್ತರು ಶ್ರೀಗಳ ದರ್ಶನ ಪಡೆದು ಫಲಮಂತ್ರಾಕ್ಷತೆ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಮಠದ ವ್ಯವಸ್ಥಾಪಕ ಅಭಿಷೇಕಾಚಾರ, ಮಠದ ವಿಚಾರಣಾಕರ್ತರಾದ ವಕೀಲ ಗುರುರಾಜ ಮುತಾಲಿಕ, ಅರ್ಚಕ ಪವನ ಆಚಾರ, ಗೋತಗಿ ಕೃಷ್ಣಾಚಾರ, ಮಠದ ಸಿಬ್ಬಂದಿ ಹಾಗೂ ಭಕ್ತರು ಉಪಸ್ಥಿತರಿದ್ದರು.

## ಅ. 15ರವರೆಗೆ ರಾಷ್ಟ್ರೀಯ ಅಂಚೆ ಸಪ್ತಾಹ ಕಾರ್ಯಕ್ರಮ

ರಾಯಚೂರು ಅ. 13 (ಕರ್ನಾಟಕ ವಾರ್ತೆ): ಭಾರತೀಯ ಅಂಚೆ ಇಲಾಖೆಯು ಪ್ರತಿ ವರ್ಷ ಆಚರಿಸುವಂತೆ ಈ ವರ್ಷವೂ ಅಕ್ಟೋಬರ್ 15ರವರೆಗೆ ವಿಶ್ವ ಅಂಚೆ ದಿನ ಮತ್ತು ರಾಷ್ಟ್ರೀಯ ಅಂಚೆ ಸಪ್ತಾಹ - 2026 ಅನ್ನು ರಾಯಚೂರು ವಿಭಾಗದಲ್ಲಿ ಆಚರಿಸಲಿದೆ. ಈ ವರ್ಷದ ವಿಶ್ವ ಅಂಚೆ ದಿನದ ಘೋಷವಾಕ್ಯ: ಒಂದು ಅಂಚೆ ಜಾಲ, ಅನಂತ ಸಾಧ್ಯತೆಗಳು. ಜನರ ದೈನಂದಿನ ಜೀವನದಲ್ಲಿ ಮತ್ತು ವ್ಯವಹಾರದಲ್ಲಿ ಅಂಚೆಯ ಪಾತ್ರ, ಜಾಗತಿಕ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಯಲ್ಲಿ ಅದರ ಕೊಡುಗೆಯ ಬಗ್ಗೆ ಜಾಗೃತಿ ಮೂಡಿಸುವುದು ಈ ಆಚರಣೆಯ ಉದ್ದೇಶವಾಗಿದೆ.

ಅಂಚೆ ಇಲಾಖೆಯಲ್ಲಿ ಬಹಳಷ್ಟು ಬದಲಾವಣೆಗಳಾಗುತ್ತಿವೆ. ಹಣಕಾಸು ಸೇವೆಗಳು, ಉಳಿತಾಯ ಖಾತೆ, ಅಲ್ಪ ಉಳಿತಾಯ ಯೋಜನೆಗಳಾದ ಆರ್‌ಡಿ, ಟಿಡಿ, ಪಿಪಿಎಫ್, ಎನ್.ಎಸ್.ಸಿ, ಕೆವಿಪಿ, ಸುಕನ್ಯಾ ಸಮೃದ್ಧಿ ಯೋಜನೆ, ಎಲ್ಲ ಅಂಚೆ ಕಚೇರಿಗಳಲ್ಲಿ ಲಭ್ಯವಿವೆ. ಡಿಜಿಟಲ್ ವ್ಯವಸ್ಥೆಗಳಾದ ನೆಟ್ ಬ್ಯಾಂಕಿಗ್, ಮೊಬೈಲ್ ಬ್ಯಾಂಕಿಗ್, ಸೇವೆಗಳು ಲಭ್ಯವಿವೆ. ಪಿಎಮ್‌ಎಸ್‌ಬಿವೈ ಕೇವಲ ರೂ.20/-, ಪಿಎಮ್‌ಜೆಜೆಬಿವೈ ರೂ.420/- ಪಾವತಿಸಿದರೆ ರೂ.2 ಲಕ್ಷ ವಿಮೆ ಸಿಗುತ್ತದೆ. ಜೊತೆಗೆ ಐಪಿಪಿಬಿ ಆ್ಯಪ್ ಮೂಲಕ ಎಲ್ಲ ಸೇವೆಗಳಿಗೆ ಹಣ ವರ್ಗಾವಣೆ, ಫೋನ್ ಪ್ಲೇ ಹಾಗೂ ಗೂಗಲ್ ಪ್ಲೇ ಮೂಲಕ ಪೋಸ್ಟಲ್ ಲೈಫ್ ಇನ್ಶ್ಯೂರೆನ್ಸ್ ಪಾವತಿಸಲು ಅವಕಾಶವಿದೆ. ಜೀವವಿಮೆಗಳು, ಅಂಚೆ ಜೀವ ವಿಮೆ ಹಾಗೂ ಗ್ರಾಮೀಣ ಅಂಚೆ ಜೀವ ವಿಮೆ, ಆಧಾರ್ ನೋಂದಣಿ ಮತ್ತು ತಿದ್ದುಪಡಿ, ತ್ವರಿತ ತಪಾಲುಗಳ ವಿಲೇವಾರಿ ಸೇವೆಗಳು ಲಭ್ಯವಿವೆ. ಉಳಿತಾಯ ಮನೋಭಾವನೆ ಇಟ್ಟುಕೊಳ್ಳುವುದು ಇಂದಿನ ಕಾಲಘಟ್ಟದಲ್ಲಿ ಅತೀ ಪ್ರಮುಖವಾದುದು. ನಾವು ಮಾಡುವ ಹಣಕಾಸು ಉಳಿತಾಯ ಮುಂದೊಂದು ದಿನ ನಮಗೆ ಸೂಕ್ತ ಸಮಯದಲ್ಲಿ ವರದಾನವಾಗಿ ಮರುಕಳಿಸುತ್ತದೆ. ಹಾಗಾಗಿ, ಎಲ್ಲರಿಗೂ ಒಪ್ಪುವಂತಹ ಸೇವೆಗಳು ನಮ್ಮಲ್ಲಿವೆ, ಒಮ್ಮೆ ತಮ್ಮ ಹತ್ತಿರದ ಅಂಚೆ ಕಚೇರಿಗೆ ಭೇಟಿ ನೀಡಬಹುದಾಗಿದೆ ಎಂದು ಅಂಚೆ ಅಧೀಕ್ಷಕರಾದ ಶಿವಾನಂದ ಆರ್.ಎಚ್ ಅವರು ತಿಳಿಸಿದ್ದಾರೆ.

## ಕೊಪ್ಪಳ ವಿ.ವಿ.ಯಲ್ಲಿ ರಕ್ತದಾನ ಶಿಬಿರ ಯಶಸ್ವಿ

ಕೊಪ್ಪಳ ಅ. 13 (ಕರ್ನಾಟಕ ವಾರ್ತೆ): ಕೊಪ್ಪಳ ವಿಶ್ವವಿದ್ಯಾಲಯ, ಜಿಲ್ಲಾ ಆರೋಗ್ಯ ಇಲಾಖೆ, ಆಯುಷ್ ಇಲಾಖೆ, ಪ್ರಾಥಮಿಕ ಆರೋಗ್ಯ ಕೇಂದ್ರ ಬನ್ನಿಕೊಪ್ಪ ಸಹಯೋಗದಲ್ಲಿ ಮಂಗಳವಾರ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಸ್ವಯಂಪ್ರೇರಿತ ರಕ್ತದಾನ ಶಿಬಿರವು ಯಶಸ್ವಿಯಾಗಿ ಜರುಗಿತು.

ಕೊಪ್ಪಳ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಟಿವಿ ವಾರುಣಿಯವರು ಶಿಬಿರಕ್ಕೆ ಚಾಲನೆ ನೀಡಿದರು. ನಂತರ ಮಾತನಾಡಿದ ಅವರು, ರಕ್ತದಾನ ಶ್ರೇಷ್ಠ ದಾನವಾಗಿದೆ. ಇದರಿಂದ ಹೃದಯಾಘಾತ ತಪ್ಪಿಸಲು ಇತರೆ ಆರೋಗ್ಯ ಸಮಸ್ಯೆಗಳನ್ನು ತಡೆಗಟ್ಟಲು ಸಾಧ್ಯ. ಇಂತಹ ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳಬೇಕು. ಇದೊಂದು ಉತ್ತಮ ರೀತಿಯ ಸಮಾಜ ಸೇವೆ ಎಂದು ತಿಳಿಸಿದರು.

ಈ ವೇಳೆ ಮಾತನಾಡಿದ, ಬನ್ನಿಕೊಪ್ಪ ಆರೋಗ್ಯ ಕೇಂದ್ರದ ಆರೋಗ್ಯಾಧಿಕಾರಿ ಡಾ. ದಿವಾಕರ ಅವರು, ಸಮುದಾಯ ಆರೋಗ್ಯಾಧಿಕಾರಿ ಮಹೇಶ ಹೆಬ್ಬಳ್ಳಿಯವರು, ರಕ್ತದಾನ ಶಿಬಿರದ ಮಹತ್ವ, ರಕ್ತದಾನದಿಂದಾಗುವ ಲಾಭ, ರಕ್ತದಾನದ ಅರ್ಹತೆಯ ತಿಳಿಸಿದರು.

ಡಾ. ವೀರೇಶ ಉತ್ತಂಗಿ ಸ್ವಾಗತಿಸಿ, ನಿರೂಪಿಸಿದರು. ಈ ಸಂದರ್ಭದಲ್ಲಿ ಬೋಧಕ ಬೋಧಕೇತರ ಸಿಬ್ಬಂಧಿ, ವಿದ್ಯಾರ್ಥಿ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು. ನಂತರದಲ್ಲಿ ಉಪನ್ಯಾಸಕರು ವಿದ್ಯಾರ್ಥಿಗಳಿಂದ ರಕ್ತದಾನ ಜರುಗಿತು.

# ರಾಷ್ಟ್ರ ನಿರ್ಮಾಣದಲ್ಲಿ ಯುವಜನರ ಪಾತ್ರ ಮಹತ್ವದ್ದು: ಡಾ. ಕೃಷ್ಣ ರಾಥೋಡ್



ರಾಯಚೂರು, ಅ.13: ದೇಶದ ಅಭಿವೃದ್ಧಿ ಹಾಗೂ ಭವಿಷ್ಯ ರೂಪಿಸುವಲ್ಲಿ ಯುವಜನರ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಶಿಕ್ಷಣದ ಜೊತೆಗೆ ಶಿಸ್ತು, ಸೇವಾ ಮನೋಭಾವ ಹಾಗೂ ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸಿಕೊಂಡಾಗ ಮಾತ್ರ ಸದೃಢ ರಾಷ್ಟ್ರ ನಿರ್ಮಾಣ ಸಾಧ್ಯ ಎಂದು ಎಲ್‌ವಿಡಿ ಪದವಿ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಡಾ. ಕೃಷ್ಣ ರಾಥೋಡ್ ಅಭಿಪ್ರಾಯಪಟ್ಟರು.

ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ, ರಾಯಚೂರು ಹಾಗೂ ಜಿಲ್ಲಾ ವೀರಶೈವ ಲಿಂಗಾಯತ ಸಮಾಜದ ಹೇರೂರು ಚಂದ್ರಾಯಗೌಡ ಮಲ್ದಾರ ಸಿದ್ದಪ್ಪಗೌಡ ಕರೆಡ್ಡಿ ಪದವಿ ಮಹಾವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಘಟಕದ ವತಿಯಿಂದ ತಾಲೂಕಿನ ಮನ್ಸಲಾಪುರ ಗ್ರಾಮದ ಶ್ರೀ ಸಿದ್ದಲಿಂಗೇಶ್ವರ ದೇವಸ್ಥಾನದಲ್ಲಿ ಹಮ್ಮಿಕೊಂಡಿರುವ ವಾರ್ಷಿಕ ವಿಶೇಷ ಶಿಬಿರದ ಎರಡನೇ ದಿನವಾದ ಮಂಗಳವಾರ ನಡೆದ ರಾಷ್ಟ್ರ ನಿರ್ಮಾಣದಲ್ಲಿ ಯುವಕರ ಪಾತ್ರ ವಿಷಯದ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಯುವಜನರು ದೇಶದ ಭವಿಷ್ಯದ ಶಕ್ತಿಯಾಗಿದ್ದು, ಅವರಲ್ಲಿ ಜ್ಞಾನ, ಕೌಶಲ್ಯ, ನಾಯಕತ್ವ ಹಾಗೂ ಸಮಾಜದ ಬಗ್ಗೆ ಕಾಳಜಿ ಬೆಳೆದಾಗ ರಾಷ್ಟ್ರದ ಪ್ರಗತಿಗೆ ಹೆಚ್ಚಿನ ಕೊಡುಗೆ ನೀಡಲು ಸಾಧ್ಯವಾಗುತ್ತದೆ. ವಿದ್ಯಾರ್ಥಿಗಳು ತಮ್ಮ ವೈಯಕ್ತಿಕ ಸಾಧನೆಗಳ ಜೊತೆಗೆ ಸಮಾಜದ ಅಭಿವೃದ್ಧಿಗೂ ಆದ್ಯತೆ ನೀಡಬೇಕು. ಶಿಕ್ಷಣದಿಂದ ಪಡೆದ ಜ್ಞಾನವನ್ನು ಜನರ ಸಮಸ್ಯೆಗಳಿಗೆ ಸ್ಪಂದಿಸಲು ಬಳಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ರಾಷ್ಟ್ರೀಯ ಸೇವಾ ಯೋಜನೆಯಂತಹ ಚಟುವಟಿಕೆಗಳು ವಿದ್ಯಾರ್ಥಿಗಳಿಗೆ ಗ್ರಾಮೀಣ ಜನಜೀವನವನ್ನು ಹತ್ತಿರದಿಂದ ಅರಿಯಲು ಅವಕಾಶ ಕಲ್ಪಿಸುತ್ತವೆ. ಸಮಾಜದ ವಿವಿಧ ಸಮಸ್ಯೆಗಳನ್ನು ಗುರುತಿಸುವುದರ ಜೊತೆಗೆ ಅವುಗಳ ಪರಿಹಾರಕ್ಕೆ ತಮ್ಮಿಂದ ಸಾಧ್ಯವಾದ ಕೊಡುಗೆ ನೀಡುವ ಮನೋಭಾವವನ್ನು ಯುವಜನರು ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಮಹಾವಿದ್ಯಾಲಯದ ಪ್ರಾಂಶುಪಾಲ ಪರ್ವತರೆಡ್ಡಿ ಮಾತನಾಡಿ, ವಿದ್ಯಾರ್ಥಿ ಜೀವನದಲ್ಲಿ ಶಿಸ್ತು, ಸಮಯಪ್ರಜ್ಞೆ, ಸೇವಾಭಾವ ಹಾಗೂ ಜವಾಬ್ದಾರಿಯುತ ನಡೆ ಅತ್ಯಂತ ಮುಖ್ಯವಾಗಿದೆ. ಯುವಕರು ಶಿಕ್ಷಣದ ಜೊತೆಗೆ ಸಾಮಾಜಿಕ ಚಟುವಟಿಕೆಗಳಲ್ಲಿಯೂ ಸಕ್ರಿಯವಾಗಿ ಪಾಲ್ಗೊಂಡು ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ವೀರಶೈವ ಲಿಂಗಾಯತ ಸಮಾಜದ ಸದಸ್ಯ ಹರವಿ ವೀರೇಂದ್ರ ಪಾಟೀಲ ಮಾತನಾಡಿ, ಯುವಜನರು ತಮ್ಮ ಸಾಮರ್ಥ್ಯವನ್ನು ಸದುಪಯೋಗಪಡಿಸಿಕೊಂಡು ದೇಶದ ಪ್ರಗತಿಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ರಾಷ್ಟ್ರದ ಅಭಿವೃದ್ಧಿಗೆ ಪ್ರತಿಯೊಬ್ಬ ಯುವಕನ ಕೊಡುಗೆಯೂ ಮುಖ್ಯವಾಗಿದೆ ಎಂದು ಹೇಳಿದರು.

ಮಹಾವಿದ್ಯಾಲಯದ ಇತಿಹಾಸ ಉಪನ್ಯಾಸಕಿ ರೇಣುಕಾ, ರಾಷ್ಟ್ರೀಯ ಸೇವಾ ಯೋಜನೆಯ ಕಾರ್ಯಕ್ರಮಾಧಿಕಾರಿ ಶರಣಪ್ಪ, ಗ್ರಾಮದ ಮುಖಂಡರಾದ ಬನಶಂಕರಯ್ಯ, ಫಾಲಾಕ್ಷ ರೆಡ್ಡಿ ಹಾಗೂ ಪೊಲೀಸ್ ಪಾಟೀಲ ಶರಣಪ್ಪಗೌಡ ಅವರು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿ, ಶಿಬಿರದ ಮಹತ್ವ ಮತ್ತು ಸಮಾಜಸೇವೆಯ ಅಗತ್ಯವನ್ನು ವಿವರಿಸಿದರು.

ಈ ಸಂದರ್ಭದಲ್ಲಿ ಸಹ ಶಿಬಿರಾಧಿಕಾರಿಗಳಾದ ಗಂಗಾಧರ, ಈರಪ್ಪ ಸರ್ಜಾಪುರ, ಉಪನ್ಯಾಸಕರಾದ ಪದ್ಮ, ಟಿಕಪ್ಪ ಚವ್ಹಾಣ, ಅಜೇಯಕುಮಾರ ಸೇರಿದಂತೆ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಸಾಂಕ್ರಾಮಿಕ ರೋಗಗಳ ತಡೆಗೆ ಸಾರ್ವಜನಿಕರ ಸಹಕಾರ ಅಗತ್ಯ: ಡಾ. ಎಸ್.ಜಿ. ಪಾಟೀಲ್



ಕಲ್ಮಲ, ಅ.13: ಸಮುದಾಯದ ಆರೋಗ್ಯ ಕಾಪಾಡುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ಸಾಂಕ್ರಾಮಿಕ ಹಾಗೂ ಅಸಾಂಕ್ರಾಮಿಕ ರೋಗಗಳ ತಡೆಗಟ್ಟುವಿಕೆಗೆ ಸಾರ್ವಜನಿಕರು ಆರೋಗ್ಯ ಇಲಾಖೆಯೊಂದಿಗೆ ಕೈಜೋಡಿಸಬೇಕು ಎಂದು ನವೋದಯ ವೈದ್ಯಕೀಯ ಮಹಾವಿದ್ಯಾಲಯದ ಫಿಸಿಯೋಥೆರಪಿ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ಎಸ್.ಜಿ. ಪಾಟೀಲ್ ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕಲ್ಮಲ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ರಾಯಚೂರಿನ ನವೋದಯ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರದ ಸಹಯೋಗದಲ್ಲಿ ಕಲ್ಮಲ ಪ್ರಾಥಮಿಕ ಆರೋಗ್ಯ ಕೇಂದ್ರದ ಆವರಣದಲ್ಲಿ ಮಂಗಳವಾರ ಆಯೋಜಿಸಿದ್ದ ಬೃಹತ್ ಆರೋಗ್ಯ ತಪಾಸಣೆ ಮತ್ತು ಚಿಕಿತ್ಸಾ ಶಿಬಿರದಲ್ಲಿ ಅವರು ಮಾತನಾಡಿದರು.

ಕ್ಷಯರೋಗ ಹಾಗೂ ಕುಷ್ಠರೋಗದಂತಹ ಸಾಂಕ್ರಾಮಿಕ ಕಾಯಿಲೆಗಳ ನಿರ್ಮೂಲನೆಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು ಅತ್ಯಂತ ಅಗತ್ಯವಾಗಿದೆ. ರೋಗದ ಲಕ್ಷಣಗಳನ್ನು ಆರಂಭಿಕ ಹಂತದಲ್ಲಿಯೇ ಗುರುತಿಸಿ ಸೂಕ್ತ ಚಿಕಿತ್ಸೆ ಪಡೆದರೆ ಕಾಯಿಲೆ ಹರಡುವುದನ್ನು ತಡೆಗಟ್ಟಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಎರಡು ವಾರಗಳಿಗಿಂತ ಹೆಚ್ಚು ಕಾಲ ಕೆಮ್ಮು, ಹಸಿವಿನ ಕೊರತೆ, ದೇಹದ ತೂಕ ಕಡಿಮೆಯಾಗುವುದು, ಸಂಜೆಯ ವೇಳೆ ಜ್ವರ, ರಾತ್ರಿ ಬೆವರುವುದು ಹಾಗೂ ಕಫದಲ್ಲಿ ರಕ್ತ ಕಾಣಿಸಿಕೊಳ್ಳುವುದು ಕ್ಷಯರೋಗದ ಸಂಭವನೀಯ ಲಕ್ಷಣಗಳಾಗಿವೆ. ಇಂತಹ ಲಕ್ಷಣಗಳು ಕಂಡುಬಂದಲ್ಲಿ ನಿರ್ಲಕ್ಷಿಸದೆ ಸಮೀಪದ ಆರೋಗ್ಯ ಕೇಂದ್ರದಲ್ಲಿ ಪರೀಕ್ಷೆ ಮಾಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಅದೇ ರೀತಿ, ದೇಹದ ಮೇಲೆ ಸ್ಪರ್ಶಜ್ಞಾನ ಕಡಿಮೆಯಾಗಿರುವ ತಿಳಿಬಿಳಿ ಅಥವಾ ತಾಮ್ರವರ್ಣದ ಮಚ್ಚೆಗಳು ಕಾಣಿಸಿಕೊಂಡರೆ ಕುಷ್ಠರೋಗದ ಸಾಧ್ಯತೆ ಇರುವುದರಿಂದ ತಕ್ಷಣ ವೈದ್ಯರನ್ನು ಸಂಪರ್ಕಿಸಬೇಕು. ಸಕಾಲದಲ್ಲಿ ರೋಗ ಪತ್ತೆಹಚ್ಚಿ ಚಿಕಿತ್ಸೆ ಪಡೆಯುವುದರಿಂದ ಆರೋಗ್ಯದ ಮೇಲೆ ಉಂಟಾಗಬಹುದಾದ ದುಷ್ಪರಿಣಾಮಗಳನ್ನು ತಪ್ಪಿಸಬಹುದು ಎಂದು ತಿಳಿಸಿದರು.

ಎಚ್‌ಐವಿ ಸೋಂಕಿನ ಕುರಿತು ಮಾತನಾಡಿದ ಅವರು, ಇತ್ತೀಚಿನ ವರದಿಗಳ ಪ್ರಕಾರ ಸೋಂಕಿನ ಪ್ರಮಾಣದಲ್ಲಿ ಮತ್ತೆ ಏರಿಕೆ ಕಂಡುಬರುತ್ತಿರುವುದು ಕಳವಳಕಾರಿ ವಿಷಯವಾಗಿದೆ. ವಿಶೇಷವಾಗಿ ಯುವಜನರಲ್ಲಿ ಎಚ್‌ಐವಿ ಸೋಂಕು ಹರಡುವ ವಿಧಾನಗಳು ಹಾಗೂ ತಡೆಗಟ್ಟುವ ಕ್ರಮಗಳ ಬಗ್ಗೆ ಜಾಗೃತಿ ಮೂಡಿಸಬೇಕು. ಆರೋಗ್ಯದ ಕುರಿತು ನಿರ್ಲಕ್ಷ್ಯ ವಹಿಸದೆ ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸುವುದು ಅಗತ್ಯವಾಗಿದೆ ಎಂದು ಹೇಳಿದರು.

ಶಿಬಿರದಲ್ಲಿ ನವೋದಯ ವೈದ್ಯಕೀಯ ಮಹಾವಿದ್ಯಾಲಯದ ವಿವಿಧ ವಿಭಾಗಗಳ ತಜ್ಞ ವೈದ್ಯರು ಸಾರ್ವಜನಿಕರಿಗೆ ಆರೋಗ್ಯ ತಪಾಸಣೆ ನಡೆಸಿದರು. ಕಣ್ಣಿನ ತಪಾಸಣೆ, ದಂತ ಪರೀಕ್ಷೆ, ಮೂಳೆ ಮತ್ತು ಕೀಲು ನೋವಿನ ಸಮಸ್ಯೆಗಳು ಸೇರಿದಂತೆ ವಿವಿಧ ಆರೋಗ್ಯ ಸಮಸ್ಯೆಗಳ ಕುರಿತು ಪರೀಕ್ಷಿಸಿ ಅಗತ್ಯ ಚಿಕಿತ್ಸಾ ಸಲಹೆ ನೀಡಲಾಯಿತು. ಕಲ್ಮಲ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಸಾರ್ವಜನಿಕರು ಶಿಬಿರದ ಪ್ರಯೋಜನ ಪಡೆದರು.

ಈ ಸಂದರ್ಭದಲ್ಲಿ ಫಾರ್ಮ್-ಡಿ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ಧನಂಜಯ್, ಸಮುದಾಯ ವೈದ್ಯಕೀಯ ಶಾಸ್ತ್ರದ ಸಹಾಯಕ ಪ್ರಾಧ್ಯಾಪಕಿ ಡಾ. ಲಕ್ಷ್ಮಿ ಪಾಟೀಲ್, ದಂತ ಚಿಕಿತ್ಸಾ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ನಾಸಿ ಇಸ್ಮಾಯಿಲ್, ಪ್ರಸೂತಿ ಮತ್ತು ಸ್ತ್ರೀರೋಗ ವಿಭಾಗದ ಹಿರಿಯ ರೆಸಿಡೆಂಟ್ ವೈದ್ಯ ಡಾ. ಪವನ್ ಕುಮಾರ್, ಅಸ್ಥಿಚಿಕಿತ್ಸಾ ವಿಭಾಗದ ಹಿರಿಯ ರೆಸಿಡೆಂಟ್ ವೈದ್ಯ ಡಾ. ಸೈಯದ್, ಸಾಮಾನ್ಯ ವೈದ್ಯಕೀಯ ವಿಭಾಗದ ರೆಸಿಡೆಂಟ್ ವೈದ್ಯ ಡಾ. ಸಿದ್ಧಾರ್ಥ್ ಪಾಟೀಲ್ ಹಾಗೂ ನೇತ್ರ ಚಿಕಿತ್ಸಾ ವಿಭಾಗದ ಸಹಾಯಕ ಪ್ರಾಧ್ಯಾಪಕಿ ಡಾ. ಅಪೂರ್ವ ಡಿ. ಉಪಸ್ಥಿತರಿದ್ದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ನಾಗರಾಜ್ ಜಗತಾಪ್, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಭಾನುಕಾಂತ ರೆಡ್ಡಿ, ಹಿರಿಯ ಪಿಎಚ್‌ಸಿಓ ರೇಣುಕಾ, ಫಾರ್ಮಸಿ ಅಧಿಕಾರಿ ಶಕೀಲ್ ಅಹ್ಮದ್, ಹಿರಿಯ ಎಲ್‌ಟಿಓ ಬಸೀರ್, ಪಿಎಚ್‌ಸಿಓ ಪ್ರೇಮಾವತಿ, ಎಚ್‌ಐಓ ದೇವರಾಜ್ ಸೇರಿದಂತೆ ಆರೋಗ್ಯ ಇಲಾಖೆಯ ಸಿಬ್ಬಂದಿ ಹಾಗೂ ಆಶಾ ಕಾರ್ಯಕರ್ತೆಯರು ಭಾಗವಹಿಸಿದ್ದರು.

# ನಂದಿಹಾಳ ಹಳ್ಳಕ್ಕೆ ನೀರು ಹರಿಸಲು ಆಗ್ರಹ: ಅ.17ರಂದು ರಸ್ತೆ ತಡೆ ಪ್ರತಿಭಟನೆ ಎಚ್ಚರಿಕೆ



ಮಾನ್ವಿ: ತಾಲೂಕಿನ ನಂದಿಹಾಳ ಹಳ್ಳಕ್ಕೆ ಗೊಲ್ಲದಿನ್ನಿ ಎಸ್ಕೇಪ್ ಮೂಲಕ ನೀರು ಹರಿಸಿ ಗ್ರಾಮೀಣ ಪ್ರದೇಶಗಳಲ್ಲಿ ಉಂಟಾಗಿರುವ ಕುಡಿಯುವ ನೀರಿನ ಸಮಸ್ಯೆಯನ್ನು ಪರಿಹರಿಸಬೇಕು ಎಂದು ಒತ್ತಾಯಿಸಿ ಹಳ್ಳದ ವ್ಯಾಪ್ತಿಯ ವಿವಿಧ ಗ್ರಾಮಗಳ ರೈತರು ಹಾಗೂ ಗ್ರಾಮಸ್ಥರು ತಹಶೀಲ್ದಾರ್ ಭೀಮರಾಯ ಬಿ. ರಾಮಸಮುದ್ರ ಅವರಿಗೆ ಮನವಿ ಸಲ್ಲಿಸಿದರು.

ಪಟ್ಟಣದ ತಹಶೀಲ್ದಾರ್ ಕಚೇರಿಯಲ್ಲಿ ಮನವಿ ಸಲ್ಲಿಸಿದ ಬಳಿಕ ಮಾತನಾಡಿದ ರಾಜಲದಿನ್ನಿ ಗ್ರಾಮದ ಶಿವಶಂಕರಯ್ಯ ಸ್ವಾಮಿ, ಪ್ರಸಕ್ತ ವರ್ಷ ಸಮರ್ಪಕ ಮಳೆಯಾಗದ ಪರಿಣಾಮ ತಾಲೂಕಿನಲ್ಲಿ ಬರಗಾಲದ ಪರಿಸ್ಥಿತಿ ಎದುರಾಗಿದೆ. ಗ್ರಾಮೀಣ ಪ್ರದೇಶಗಳಲ್ಲಿನ ಕೊಳವೆಬಾವಿಗಳು ಸೇರಿದಂತೆ ವಿವಿಧ ಜಲಮೂಲಗಳು ಬತ್ತಿಹೋಗಿದ್ದು, ಜನರು ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ತೀವ್ರ ಸಮಸ್ಯೆ ಉಂಟಾಗಿದೆ ಎಂದು ತಿಳಿಸಿದರು.

ಮಳೆಯ ಕೊರತೆಯಿಂದ ಅಂತರ್ಜಲ ಮಟ್ಟ ಕುಸಿದಿದ್ದು, ಹಲವು ಗ್ರಾಮಗಳಲ್ಲಿ ನೀರಿನ ಸಮಸ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ರೈತರು ತಮ್ಮ ಜಾನುವಾರುಗಳಿಗೆ ನೀರು ಒದಗಿಸಲು ಪರದಾಡುವಂತಾಗಿದೆ. ಇಂತಹ ಸಂಕಷ್ಟದ ಸಂದರ್ಭದಲ್ಲಿ ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಂಡು ನಂದಿಹಾಳ ಹಳ್ಳಕ್ಕೆ ನೀರು ಹರಿಸುವ ವ್ಯವಸ್ಥೆ ಮಾಡಬೇಕು ಎಂದು ಒತ್ತಾಯಿಸಿದರು.

ಗೊಲ್ಲದಿನ್ನಿ ಎಸ್ಕೇಪ್ ಮೂಲಕ ನಂದಿಹಾಳ ಹಳ್ಳಕ್ಕೆ ನೀರು ಹರಿಸಿದರೆ ತಾಲೂಕಿನ ಜಾನೇಕಲ್, ಅಮರಾವತಿ, ನಸ್ಲಾಪುರ, ನಂದಿಹಾಳ, ರಾಜಲದಿನ್ನಿ, ಯರಮಲದೊಡ್ಡಿ, ಮುಸ್ಟೂರು, ರಂಗದಾಳ ಹಾಗೂ ಬುದ್ದಿನ್ನಿ ಗ್ರಾಮಗಳ ಜನರಿಗೆ ಅನುಕೂಲವಾಗಲಿದೆ. ಹಳ್ಳದಲ್ಲಿ ನೀರು ಹರಿಯುವುದರಿಂದ ಸುತ್ತಮುತ್ತಲಿನ ಜಲಮೂಲಗಳಿಗೂ ನೆರವಾಗುವುದರ ಜೊತೆಗೆ ಜನರು ಹಾಗೂ ಜಾನುವಾರುಗಳ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಸಹಕಾರಿಯಾಗಲಿದೆ ಎಂದು ವಿವರಿಸಿದರು.

ಈಗಾಗಲೇ ಮಳೆಯ ಕೊರತೆಯಿಂದ ರೈತರು ಬೆಳೆ ನಷ್ಟ ಹಾಗೂ ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ. ಅದರ ಜೊತೆಗೆ ಕುಡಿಯುವ ನೀರಿನ ಅಭಾವವೂ ಉಂಟಾಗಿರುವುದರಿಂದ ಗ್ರಾಮೀಣ ಜನರ ಬದುಕು ಮತ್ತಷ್ಟು ಕಷ್ಟಕರವಾಗಿದೆ. ಆದ್ದರಿಂದ ನೀರಾವರಿ ಹಾಗೂ ಕಂದಾಯ ಇಲಾಖೆಯ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ ತುರ್ತಾಗಿ ಹಳ್ಳಕ್ಕೆ ನೀರು ಹರಿಸಲು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಅಕ್ಟೋಬರ್ 17ರೊಳಗೆ ಗೊಲ್ಲದಿನ್ನಿ ಎಸ್ಕೇಪ್ ಮೂಲಕ ನಂದಿಹಾಳ ಹಳ್ಳಕ್ಕೆ ನೀರು ಹರಿಸದಿದ್ದರೆ, ಅಂದು ಬೆಳಿಗ್ಗೆ 10 ಗಂಟೆಯಿಂದ ನಂದಿಹಾಳ ಗ್ರಾಮದ ಸಮೀಪದ ರಾಜ್ಯ ಹೆದ್ದಾರಿಯ ಸೇತುವೆ ಬಳಿ ರಸ್ತೆ ತಡೆ ನಡೆಸಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದರು.

ಈ ಹೋರಾಟದಲ್ಲಿ ನಂದಿಹಾಳ ಹಳ್ಳದ ದಡದಲ್ಲಿರುವ ಜಾನೇಕಲ್, ಅಮರಾವತಿ, ನಸ್ಲಾಪುರ, ನಂದಿಹಾಳ, ರಾಜಲದಿನ್ನಿ, ಯರಮಲದೊಡ್ಡಿ, ಮುಸ್ಟೂರು, ರಂಗದಾಳ ಹಾಗೂ ಬುದ್ದಿನ್ನಿ ಗ್ರಾಮಗಳ ಸಾವಿರಾರು ಜನರು ಭಾಗವಹಿಸಲಿದ್ದಾರೆ. ಸಾರ್ವಜನಿಕರ ಕುಡಿಯುವ ನೀರಿನ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ನಿಗದಿತ ಅವಧಿಯೊಳಗೆ ಪರಿಹಾರ ಒದಗಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಶರಣಬಸವ ನಸ್ಲಾಪುರ, ರಾಮನಗೌಡ ನಂದಿಹಾಳ, ನಬೀಸಾಬ್, ಅಮರೇಶಗೌಡ ಪೊಲೀಸ್ ಪಾಟೀಲ್, ಚನ್ನಬಸವ, ಹುಸೇನಪ್ಪ, ರವಿಕುಮಾರ ಪಾಟೀಲ್, ಈರಯ್ಯ ಪೂಜಾರಿ, ಶಿವಣ್ಣ, ಶರಣಬಸಪ್ಪಗೌಡ, ರಾಜಾವಿರುಪಾಕ್ಷಯ್ಯ ಸ್ವಾಮಿ, ಮಲ್ಲಯ್ಯ ಸ್ವಾಮಿ, ರಮೇಶ, ಶೇಷಾರೆಡ್ಡಿ, ಮಧುಸೂಧನ್ ರೆಡ್ಡಿ, ಆಂಜನೇಯ ನಾಯಕ, ಲಕ್ಷ್ಮೀರೆಡ್ಡಿ, ರಾಮಕೃಷ್ಣ, ವಿಠೋಬ ನಾಯಕ ಸೇರಿದಂತೆ ವಿವಿಧ ಗ್ರಾಮಗಳ ರೈತರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಮಾನಸಿಕ ಆರೋಗ್ಯದ ಜೊತೆಗೆ ಸಾಮಾಜಿಕ ಜಾಗೃತಿ ಅಗತ್ಯ: ನ್ಯಾಯಾಧೀಶ ಸುರೇಶ್ ಅಣ್ಣಪ್ಪ ಸವದಿ



ದೇವದುರ್ಗ: ಪ್ರತಿಯೊಬ್ಬರೂ ದೈಹಿಕ ಆರೋಗ್ಯದ ಜೊತೆಗೆ ಮಾನಸಿಕ ಆರೋಗ್ಯಕ್ಕೂ ಆದ್ಯತೆ ನೀಡಬೇಕು. ಸಮಾಜದಲ್ಲಿ ಬೇರೂರಿರುವ ವರದಕ್ಷಿಣೆ, ಬಾಲ್ಯವಿವಾಹ ಹಾಗೂ ಬಾಲಕಾರ್ಮಿಕ ಪದ್ಧತಿಯಂತಹ ಸಾಮಾಜಿಕ ಪಿಡುಗುಗಳನ್ನು ನಿರ್ಮೂಲನೆ ಮಾಡಲು ಶಿಕ್ಷಣ ಮತ್ತು ಜನಜಾಗೃತಿ ಅತ್ಯಗತ್ಯವಾಗಿದೆ ಎಂದು ದೇವದುರ್ಗದ ನ್ಯಾಯಾಧೀಶ ಸುರೇಶ್ ಅಣ್ಣಪ್ಪ ಸವದಿ ಹೇಳಿದರು.

ಪಟ್ಟಣದ ಡಾನ್ ಬಾಸ್ಕೋ ಸಭಾಂಗಣದಲ್ಲಿ ತಾಲೂಕು ಕಾನೂನು ಸೇವಾ ಸಮಿತಿ, ತಾಲೂಕು ವಕೀಲರ ಸಂಘ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಡಾನ್ ಬಾಸ್ಕೋ ಮೈಂಡ್ಸ್ ಯೋಜನೆಯ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಮಾನಸಿಕ ಆರೋಗ್ಯ ಜಾಗೃತಿ, ಅಂತಾರಾಷ್ಟ್ರೀಯ ಹೆಣ್ಣುಮಗುವಿನ ದಿನಾಚರಣೆ ಹಾಗೂ ವರದಕ್ಷಿಣೆ ನಿರ್ಮೂಲನೆ ಕುರಿತ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಾನವನ ಬದುಕಿನಲ್ಲಿ ವೈಯಕ್ತಿಕ ಏಳಿಗೆಯಷ್ಟೇ ಸಮಾಜದ ಅಭಿವೃದ್ಧಿಯೂ ಮುಖ್ಯವಾಗಿದೆ. ನಮಗಾಗಿ ಮಾಡಿದರೆ ಮನುಷ್ಯ ಗುಣ, ಪರರಿಗಾಗಿ ಮಾಡಿದರೆ ದೈವ ಗುಣ ಎಂಬ ಮಾತಿನಂತೆ ಪ್ರತಿಯೊಬ್ಬರೂ ಸಮಾಜಮುಖಿ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು. ಸಾಮಾಜಿಕ ಅನಿಷ್ಟ ಪದ್ಧತಿಗಳಿಂದ ಜನರನ್ನು ಮುಕ್ತಗೊಳಿಸಲು ಕಾನೂನಿನ ಅರಿವು ಹಾಗೂ ಶಿಕ್ಷಣದ ಮೂಲಕ ಜಾಗೃತಿ ಮೂಡಿಸಬೇಕು ಎಂದು ತಿಳಿಸಿದರು.

ಮುಖ್ಯ ಅತಿಥಿಯಾಗಿದ್ದ ನ್ಯಾಯಾಧೀಶ ರಫೀಕ್ ಅಹ್ಮದ್ ಮಾತನಾಡಿ, ಜೀವನದಲ್ಲಿ ಎದುರಾಗುವ ಸಮಸ್ಯೆಗಳನ್ನು ಸಮರ್ಥವಾಗಿ ನಿಭಾಯಿಸಲು ಮಾನಸಿಕ ಸದೃಢತೆ, ದೈಹಿಕ ಆರೋಗ್ಯ ಹಾಗೂ ಏಕಾಗ್ರತೆ ಅಗತ್ಯವಾಗಿದೆ. ಮಾನಸಿಕ ಒತ್ತಡ ಅಥವಾ ಸಮಸ್ಯೆಗಳು ಎದುರಾದಾಗ ಆಪ್ತಸಮಾಲೋಚನೆ ಮತ್ತು ತಜ್ಞರ ನೆರವು ಪಡೆಯಲು ಹಿಂಜರಿಯಬಾರದು. ಬಾಲ್ಯವಿವಾಹದಿಂದ ಮಕ್ಕಳನ್ನು ರಕ್ಷಿಸಿ ಅವರಿಗೆ ಉತ್ತಮ ಭವಿಷ್ಯ ರೂಪಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದ ಅಧಿಕಾರಿ ಹಾಗೂ ಮನೋವೈದ್ಯ ಡಾ. ಮನೋಹರ್ ವೈ. ಪತ್ತಾರ್ ಮಾತನಾಡಿ, ಮಾನಸಿಕ ಆರೋಗ್ಯ ಸಮಸ್ಯೆಗಳ ಕುರಿತು ಸಮಾಜದಲ್ಲಿರುವ ತಪ್ಪು ಕಲ್ಪನೆಗಳನ್ನು ದೂರಮಾಡಬೇಕು. ಮಾನಸಿಕ ಸಮಸ್ಯೆ ಎದುರಿಸುತ್ತಿರುವವರನ್ನು ಹೀಯಾಳಿಸದೆ ಗೌರವ, ಪ್ರೀತಿ ಹಾಗೂ ಕಾಳಜಿಯಿಂದ ಕಾಣಬೇಕು. ಅಗತ್ಯವಿದ್ದಾಗ ವೈದ್ಯಕೀಯ ಚಿಕಿತ್ಸೆ ಮತ್ತು ಆಪ್ತಸಮಾಲೋಚನೆ ಪಡೆಯುವುದು ಆರೋಗ್ಯಕರ ಜೀವನಕ್ಕೆ ಸಹಕಾರಿಯಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಡಾನ್ ಬಾಸ್ಕೋ ಸಮಾಜ ಸೇವಾ ಸಂಸ್ಥೆಯ ನಿರ್ದೇಶಕ ಫಾದರ್ ಜಾನ್ ಪೌಲ್ ಮಾತನಾಡಿ, ದೇವದುರ್ಗ ತಾಲೂಕಿನ 50 ಸರ್ಕಾರಿ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಮೈಂಡ್ಸ್ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ. ವಿದ್ಯಾರ್ಥಿಗಳು, ಪೋಷಕರು ಹಾಗೂ ಸಾರ್ವಜನಿಕರಲ್ಲಿ ಮಾನಸಿಕ ಆರೋಗ್ಯದ ಕುರಿತು ಅರಿವು ಮೂಡಿಸುವುದು ಯೋಜನೆಯ ಪ್ರಮುಖ ಉದ್ದೇಶವಾಗಿದೆ. ಈ ಕಾರ್ಯಕ್ಕೆ ವಿವಿಧ ಇಲಾಖೆಗಳ ಸಹಕಾರ ಅಗತ್ಯವಾಗಿದೆ ಎಂದು ಹೇಳಿದರು.

ಮೈಂಡ್ಸ್ ಯೋಜನೆಯ ಜಿಲ್ಲಾ ಸಂಯೋಜಕ ಸಿದ್ದಲಿಂಗಪ್ಪ ಕಾಕರಗಲ್ ಪ್ರಾಸ್ತಾವಿಕವಾಗಿ ಮಾತನಾಡಿ, ಹೆಣ್ಣುಮಕ್ಕಳಿಗೆ ಶಿಕ್ಷಣ, ರಕ್ಷಣೆ ಹಾಗೂ ಸಮಾನ ಅವಕಾಶಗಳನ್ನು ಕಲ್ಪಿಸಬೇಕು. ಹೆಣ್ಣುಮಕ್ಕಳ ಹಕ್ಕುಗಳ ರಕ್ಷಣೆಯ ಜೊತೆಗೆ ಅವರಲ್ಲಿ ಆತ್ಮವಿಶ್ವಾಸ ಬೆಳೆಸುವ ವಾತಾವರಣ ನಿರ್ಮಾಣವಾಗಬೇಕು ಎಂದು ತಿಳಿಸಿದರು.

ಮಾನಸಿಕ ಆರೋಗ್ಯ ಕಾಪಾಡಿಕೊಳ್ಳಲು ಪ್ರತಿದಿನ ಏಳರಿಂದ ಎಂಟು ಗಂಟೆಗಳ ಕಾಲ ನಿದ್ರೆ ಮಾಡುವುದು, ಪೌಷ್ಟಿಕ ಆಹಾರ ಸೇವಿಸುವುದು, ಭಾವನೆಗಳನ್ನು ಅರ್ಥಮಾಡಿಕೊಳ್ಳುವುದು ಹಾಗೂ ಮಾದಕ ಪದಾರ್ಥಗಳಿಂದ ದೂರವಿರುವುದು ಅಗತ್ಯವಾಗಿದೆ. ಮಾನಸಿಕ ಒತ್ತಡ ಎದುರಾದಾಗ ಮುಕ್ತವಾಗಿ ಮಾತನಾಡಿ ಸೂಕ್ತ ನೆರವು ಪಡೆಯಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ತಾಲೂಕು ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿ ಚೆನ್ನಪ್ಪ ಗೆಜ್ಜೆಬಾವಿ, ಹಿರಿಯ ಮೇಲ್ವಿಚಾರಕಿ ಗಂಗಮ್ಮ, ವಕೀಲರಾದ ಪ್ರತಿಭಾ ಸಾಸ್ವಿಗೆರಾ, ಮಲ್ಲಿಕಾರ್ಜುನ ಮಿಯಾಪುರ, ತಾಯಪ್ಪ, ಸಂದೀಪ್ ಕುಮಾರ್, ಭಗವಂತರಾಯ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ನಾಗರಾಜ್ ಮಾನಸಗಲ್ ಕಾರ್ಯಕ್ರಮ ನಿರೂಪಿಸಿದರು. ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಸೋಮಪ್ಪ ಎಂ. ಸ್ವಾಗತಿಸಿದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಗೀತಾ ವಂದಿಸಿದರು. ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ಸ್ವಸಹಾಯ ಸಂಘಗಳ ಪ್ರತಿನಿಧಿಗಳು, ಆರೋಗ್ಯ ಇಲಾಖೆ ಹಾಗೂ ಡಾನ್ ಬಾಸ್ಕೋ ಸಂಸ್ಥೆಯ ಸಿಬ್ಬಂದಿ ಭಾಗವಹಿಸಿದ್ದರು.

ದಸರಾ ಅಂಗವಾಗಿ ಅನ್ನಪೂರ್ಣೇಶ್ವರಿ ಮಾತೆಯ ಅಲಂಕಾರ





ದಸರಾ ಅಂಗವಾಗಿ ಕಲ್ಲೂರು ಮಹಾಲಕ್ಷ್ಮಿಗೆ ವಿಶೇಷ ಅಲಂಕಾರ

# ದಸರಾ ಮಹೋತ್ಸವದ ಅಂಗವಾಗಿ ಮಹಾಲಕ್ಷ್ಮೀ ದೇವಿಗೆ ವಿಶೇಷ ಪೂಜೆ





ಮಾನ್ವಿ: ಪಟ್ಟಣದ ರಾಯಚೂರು ರಸ್ತೆಯಲ್ಲಿರುವ ಶ್ರೀ ಮಹಾಲಕ್ಷ್ಮೀ ದೇವಸ್ಥಾನದಲ್ಲಿ ದಸರಾ ಮಹೋತ್ಸವದ ಅಂಗವಾಗಿ ಶ್ರೀ ಮಹಾಲಕ್ಷ್ಮೀ ಅಮ್ಮನವರಿಗೆ ವಿಶೇಷ ಪೂಜೆ ಹಾಗೂ ಅಲಂಕಾರ ನೆರವೇರಿಸಲಾಯಿತು.

ದಸರಾ ಹಬ್ಬದ ಪ್ರಯುಕ್ತ ದೇವಿಯ ಮೂರ್ತಿಯನ್ನು ವಿಶೇಷವಾಗಿ ಅಲಂಕರಿಸಿ ಪೂಜೆ ಸಲ್ಲಿಸಲಾಯಿತು. ದೇವಸ್ಥಾನಕ್ಕೆ ಆಗಮಿಸಿದ ಭಕ್ತರು ಮಹಾಲಕ್ಷ್ಮೀ ಅಮ್ಮನವರ ದರ್ಶನ ಪಡೆದು ತಮ್ಮ ಕುಟುಂಬದ ಸುಖ, ಶಾಂತಿ ಹಾಗೂ ಸಮೃದ್ಧಿಗಾಗಿ ಪ್ರಾರ್ಥಿಸಿದರು.

ನವರಾತ್ರಿ ಉತ್ಸವದ ಹಿನ್ನೆಲೆಯಲ್ಲಿ ದೇವಸ್ಥಾನದಲ್ಲಿ ಭಕ್ತಿಭಾವದ ವಾತಾವರಣ ನಿರ್ಮಾಣವಾಗಿತ್ತು. ವಿಶೇಷ ಪೂಜಾ ಕಾರ್ಯಕ್ರಮದ ಅಂಗವಾಗಿ ದೇವಸ್ಥಾನಕ್ಕೆ ಆಗಮಿಸಿದ ಭಕ್ತರಿಗೆ ಅನ್ನಸಂತರ್ಪಣೆ ವ್ಯವಸ್ಥೆ ಮಾಡಲಾಗಿತ್ತು.

ದಸರಾ ಮಹೋತ್ಸವದ ಧಾರ್ಮಿಕ ಕಾರ್ಯಕ್ರಮದಲ್ಲಿ ಭಕ್ತರು ಭಾಗವಹಿಸಿ ದೇವಿಯ ದರ್ಶನ ಪಡೆದರು.

# ವೀರ ಮದಕರಿ ನಾಯಕರ ಆದರ್ಶಗಳು ಎಲ್ಲರಿಗೂ ಮಾದರಿ: ಚನ್ನಪ್ಪ ಗಡ್ಲ



ಸಿರವಾರ: ಚಿತ್ರದುರ್ಗದ ವೀರ ಮದಕರಿ ನಾಯಕರ ಶೌರ್ಯ, ಸಾಹಸ, ನಾಯಕತ್ವ ಹಾಗೂ ನಾಡಿನ ರಕ್ಷಣೆಗೆ ಅವರು ನೀಡಿದ ಕೊಡುಗೆಗಳು ಇಂದಿನ ಯುವಪೀಳಿಗೆಗೆ ಸ್ಫೂರ್ತಿಯಾಗಿದ್ದು, ಅವರ ತತ್ವಾದರ್ಶಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಪಟ್ಟಣ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಚನ್ನಪ್ಪ ಗಡ್ಲ ಕರೆ ನೀಡಿದರು.

ಪಟ್ಟಣದ ವೀರ ಮದಕರಿ ನಾಯಕ ವೃತ್ತದಲ್ಲಿ ಆಯೋಜಿಸಿದ್ದ ಜಯಂತಿ ಕಾರ್ಯಕ್ರಮದಲ್ಲಿ ಮದಕರಿ ನಾಯಕರ ಪ್ರತಿಮೆಗೆ ಪೂಜೆ ಸಲ್ಲಿಸಿ, ಮಾಲಾರ್ಪಣೆ ಮಾಡುವ ಮೂಲಕ ಗೌರವ ನಮನ ಸಲ್ಲಿಸಿದ ಬಳಿಕ ಅವರು ಮಾತನಾಡಿದರು.

ಚಿತ್ರದುರ್ಗ ಸಂಸ್ಥಾನದ ಇತಿಹಾಸದಲ್ಲಿ ವೀರ ಮದಕರಿ ನಾಯಕರು ತಮ್ಮ ಶೌರ್ಯ, ಧೈರ್ಯ ಹಾಗೂ ಆಡಳಿತ ವೈಖರಿಯಿಂದ ವಿಶಿಷ್ಟ ಸ್ಥಾನ ಪಡೆದಿದ್ದಾರೆ. ಏಳು ಸುತ್ತಿನ ಕೋಟೆಯನ್ನು ಹೊಂದಿರುವ ಚಿತ್ರದುರ್ಗದ ರಕ್ಷಣೆಯಲ್ಲಿ ನಾಯಕ ಅರಸರ ಪಾತ್ರ ಮಹತ್ವದ್ದಾಗಿದೆ. ನಾಡು, ನುಡಿ ಹಾಗೂ ಜನರ ರಕ್ಷಣೆಗಾಗಿ ಹೋರಾಡಿದ ಮದಕರಿ ನಾಯಕರ ಸಾಹಸಗಾಥೆ ಇಂದಿಗೂ ಜನಮಾನಸದಲ್ಲಿ ಅಚ್ಚಳಿಯದೆ ಉಳಿದಿದೆ ಎಂದು ಹೇಳಿದರು.

ಮದಕರಿ ನಾಯಕರ ನಾಯಕತ್ವದ ಗುಣಗಳು, ಸ್ವಾಭಿಮಾನ, ನಿಷ್ಠೆ ಹಾಗೂ ಹೋರಾಟದ ಮನೋಭಾವ ಎಲ್ಲರಿಗೂ ಮಾದರಿಯಾಗಿವೆ. ಯುವಜನರು ಇಂತಹ ಮಹನೀಯರ ಇತಿಹಾಸವನ್ನು ತಿಳಿದುಕೊಂಡು ಅವರ ಆದರ್ಶಗಳನ್ನು ಅನುಸರಿಸಬೇಕು. ಜಯಂತಿ ಆಚರಣೆಗಳು ಕೇವಲ ಪೂಜೆ ಮತ್ತು ಮಾಲಾರ್ಪಣೆಗೆ ಸೀಮಿತವಾಗದೆ, ಮಹನೀಯರ ಜೀವನ ಸಂದೇಶಗಳನ್ನು ಸಮಾಜಕ್ಕೆ ತಲುಪಿಸುವ ವೇದಿಕೆಯಾಗಬೇಕು ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಪಟ್ಟಣ ಪಂಚಾಯಿತಿ ಸದಸ್ಯ ಸೂರಿ ದುರಗಣ್ಣ ನಾಯಕ, ಅಜಿತಕುಮಾರ ಹೊನ್ನಟಗಿ, ಚಿನ್ನಾನ್ ನಾಗರಾಜ ನಾಯಕ, ರಂಗನಾಥ ನಾಯಕ, ಡಾ. ಯಲ್ಲಪ್ಪ, ಚಿನ್ನಾನ್ ಯಲ್ಲಪ್ಪ ದೊರೆ, ನಾಗರಾಜ ನಾಯಕ ಕೊಲ್ಮಿ, ಮಲ್ಲಿಕಾರ್ಜುನ, ಅಂಬು ನಾಯಕ, ಗೋಪಾಲ್ ನಾಯಕ ಸೇರಿದಂತೆ ಸಮಾಜದ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K